MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

YUVA MARGA KANNADA DAILY NEWS PAPER

ಸಂಪುಟ: 05 | ಸಂಚಿಕೆ: 53 | ಶುಕ್ರವಾರ : 12-12-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 53 | FRIDAY : 12-12-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

# ಕಳಪೆ ಔಷಧ ಪೂರೈಕೆ ಸಹಿಸುವುದಿಲ್ಲ : ಸಚಿವ ಗುಂಡೂರಾವ್ ಎಚ್ಚರಿಕೆ

**ಬೆಳಗಾವಿ, ಡಿ.11–** ಅವಧಿ ಮೀರಿದ ಮತ್ತು ಕಳಪೆ ಔಷಧಿಗಳ ಪೂರೈಕೆಯನ್ನು ಸರ್ಕಾರ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಜರುಗಿಸಲಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಎಚ್ಚರಿಕೆ ನೀಡಿದ್ದಾರೆ.

ವಿಧಾನಸಭೆಯ ಪ್ರಶ್ನೋತ್ತರದ ವೇಳೆಯಲ್ಲಿ ಮಂಗಳೂರಿನ ನಗರ ಶಾಸಕ ವೇದ ವ್ಯಾಸ ಕಾಮತ್, ಮಂಗಳೂರಿನ ಆಯುಷ್ ಸಂಯುಕ್ತ ಆಸ್ಪತ್ರೆಗೆ ಪೀಠೋಪಕರಣಗಳ ಖರೀದಿಗೆ ಸಿಎಸ್‌ಆರ್ ಅಡಿ ಒದಗಿಸಲಾಗಿದ್ದ 38.50 ಲಕ್ಷ ರೂಪಾಯಿಗಳ ಅನುದಾನವನ್ನು ನಿಯಮಬಾಹಿರವಾಗಿ ಬಳಕೆ ಮಾಡಲಾಗಿದೆ. ಆರೋಗ್ಯ ಸಮಿತಿಯ ಪೂರ್ವಾನುಮತಿ ಪಡೆದಿಲ್ಲ. ಇದು ಸರ್ಕಾರದ ಗಮನದಲ್ಲಿದೆ, ಹೀಗಿದ್ದರೂ ಅಧಿಕಾರಿಗಳ ಮೇಲೆ ಏಕೆ ಕ್ರಮ ಕೈಗೊಂಡಿಲ್ಲ, ಪ್ರಕರಣವನ್ನು ಸಚಿವರು ಮತ್ತು ಅದಕ್ಕೆ ಅಧಿಕಾರಿಗಳ ಗಮನಕ್ಕೆ ತಂದಿದ್ದೇನೆ, ತನಿಖೆಯಲ್ಲಿದೆ ಎಂದು ನುಣುಚಿಕೊಳ್ಳುತ್ತಿದ್ದಾರೆ ಎಂದು ಟೀಕಿಸಿದರು.

ಅವಧಿ ಮೀರಿದ ಮದ್ದನ್ನು ರೋಗಿಗಳಿಗೆ ನೀಡುತ್ತಿರುವ ಬಗ್ಗೆ ವಿಡಿಯೋ ಸಾಕ್ಷ್ಯ ಇದೆ. ಚಿಕ್ಕಮಗಳೂರು, ಹಾಸನ ಜಿಲ್ಲೆಗಳಿಂದಲೂ ಅವಧಿ ಮೀರಿದ ಔಷಧಿಗಳನ್ನು ಮಂಗಳೂರಿಗೆ ತಂದು ರೋಗಿಗಳಿಗೆ ನೀಡುತ್ತಿರುವುದಾಗಿ ಆರೋಪಿಸಿದರು.

ಟೆಂಡರ್ ಪ್ರಕ್ರಿಯೆಗಳಲ್ಲಿ ಔಷಧಿ ಖರೀದಿಸದೆ ಸರ್ಕಾರ ಪೂರೈಸುವ ಔಷಧಿಗಳ ಜೊತೆಗೆ ಅವಧಿ ಮೀರಿದ ಔಷಧಿಗಳನ್ನು ಇರಿಸಿ ಭ್ರಷ್ಟಾಚಾರ ಮಾಡಲಾಗುತ್ತಿದೆ. ಈ ಬಗ್ಗೆ ಲೋಕಾಯುಕ್ತ ತನಿಖೆಯಾಗುತ್ತಿದೆ, ದಾಳಿಗಳು ಕೂಡ ನಡೆದಿವೆ. ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ವಾಗ್ದಾಳಿ ನಡೆಸಿದರು.

ಉತ್ತರ ನೀಡಿದ ಸಚಿವ ದಿನೇಶ್ ಗುಂಡೂರಾವ್, ಈ ಪ್ರಕರಣದಲ್ಲಿ ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ. ಆರೋಗ್ಯ ಇಲಾಖೆ ಆಯುಕ್ತರು ದೂರು ಸ್ವೀಕರಿಸುತ್ತಿದ್ದಂತೆ ತನಿಖೆ ನಡೆಸಲಾಗಿದೆ, ಇಲಾಖಾ ವಿಚಾರಣೆ ಪ್ರಗತಿಯಲ್ಲಿದೆ, ಆರೋಪಿತರಿಗೆ ಶೋಕಾಸ್ ನೋಟೀಸ್ ನೀಡಲಾಗಿದೆ ಎಂದರು.

ಸಿ ಎಸ್ ಆರ್ ನಿಧಿ ದುರುಪಯೋಗವಾಗಿಲ್ಲ ಆದರೆ ನಿಯಮಗಳ ಪಾಲನೆಯಲ್ಲಿ ಲೋಪಗಳಿರುವ ಆರೋಪಗಳಿವೆ. ತನಿಖೆಯಲ್ಲಿ ಇದು ಸಾಬೀತಾದರೆ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಹೇಳಿದರು.

ಅವಧಿ ಮೀರಿದ ಔಷಧಿ ಮಂಗಳೂರಿನ ಆಸ್ಪತ್ರೆಗೆ ಸರಬರಾಜಾಗಿಲ್ಲ ಎಂದು ಪ್ರಾಥಮಿಕ ವಿಚಾರಣೆಯಲ್ಲಿ ಕಂಡುಬಂದಿದೆ. ಆದರೂ ವಿಚಾರಣೆ ನಡೆಸಲಾಗುವುದು. ಅವಧಿ ಮುಗಿಯಲು ಇನ್ನು ಐದಾರು ತಿಂಗಳು ಸಮಯ ಇರುವಂತಹ ಔಷಧಿಗಳನ್ನು ನೀಡಲಾಗಿದೆ. ಅವುಗಳನ್ನು ಆಯುಷ್ ಇಲಾಖೆಯಿಂದ ಆಂತರಿಕವಾಗಿಯೇ ಸರಬರಾಜು ಮಾಡಲಾಗಿದೆ. ಹೊರಗಿನಿಂದ ತರಿಸಿಕೊಂಡಿಲ್ಲ ಎಂದರು.

ಇದನ್ನು ಒಪ್ಪದ ಶಾಸಕ ವೇದವ್ಯಾಸ ಕಾಮತ್, ಅವಧಿ ಮೀರಿದ ಔಷಧಿ ನೀಡಿರುವುದಕ್ಕೆ ಸ್ಪಷ್ಟ ಸಾಕ್ಷಿ ಇದೆ. ಸಚಿವರು ಯಾವುದೇ ಲೋಪವಾಗಿಲ್ಲ ಎನ್ನುತ್ತಿರುವುದು ಸರಿಯಲ್ಲ ಎಂದಾಗ, ಲೋಪಗಳಾಗಿದ್ದರೆ ಕಠಿಣ ಕ್ರಮ ಕೈಗೊಳ್ಳುವ ಭರವಸೆಯನ್ನು ಸಚಿವರು ನೀಡಿದರು.



ಬಸವನಗುಡಿ ಶಾಸಕ ರವಿ ಸುಬ್ರಹ್ಮಣ್ಯ, ಆಯುಷ್ ಔಷಧಿ ಖರೀದಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಪ್ರತಿ ಮೂರು ತಿಂಗಳಿಗೊಮ್ಮೆ ಹಣ ಬಿಡುಗಡೆಯಾಗುತ್ತಿದೆ.

ವರ್ಷದ ಕೊನೆಯವರೆಗೂ ಅದನ್ನು ಬಳಕೆ ಮಾಡದೆ ತರಾತುರಿಯಲ್ಲಿ ವರ್ಷದ ಕೊನೆಯಲ್ಲಿ ಔಷಧಿ ಖರೀದಿಸುವ ಪ್ರಯತ್ನಗಳಾಗುತ್ತವೆ. ಇದು ವ್ಯವಸ್ಥಿತ ಷಡ್ಯಂತ್ರ ಎಂದು ದೂರಿದರು. ಆಯುಷ್ ಇಲಾಖೆಯಲ್ಲಿ ಎಂಟರಿಂದ ಒಂಬತ್ತು ವರ್ಷ ಒಂದೇ ಸ್ಥಳದಲ್ಲಿ ವೈದ್ಯರು ಕೆಲಸ ಮಾಡುತ್ತಿರುವುದು ಕಂಡು ಬಂದಿದೆ ಎಂದು ವಿವರಿಸಿದರು.

## ತಾಯಿ, ಮಕ್ಕಳ ಆಸ್ಪತ್ರೆಗೆ ಜಿಪಂ ಸಿಇಓ ಈಶ್ವರ ಕಾಂದೂ ದಿಢೀರ್ ಭೇಟಿ; ಪರಿಶೀಲನೆ



ಯುವಮಾರ್ಗ ಸುದ್ದಿ

**ರಾಯಚೂರು,ಡಿ.11–**ನಗರದಲ್ಲಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಡಿ.11 ರಂದು ದಿಢೀರ್ ಭೇಟಿ ನೀಡಿ ಆಸ್ಪತ್ರೆಯಲ್ಲಿನ ಮೂಲಭೂತ ಸೌಕರ್ಯಗಳ ಬಗ್ಗೆ ಪರಿಶೀಲಿಸಿದರು.

ಆಸ್ಪತ್ರೆಯ ನಾನಾ ವಾರ್ಡ್‌ಗಳಿಗೆ ಸಂಚರಿಸಿ ಭಾಣಂತಿಯರ ಮತ್ತು ಶಿಶುಗಳ ಯೋಗಕ್ಷೇಮ ವಿಚಾರಿಸಿದರು. ಸರಿಯಾದ ರೀತಿಯಲ್ಲಿ ಊಟ ಕೊಡುತ್ತಾರಾ? ಚಿಕಿತ್ಸೆ ಮತ್ತು ಔಷಧಿ ಸರಿಯಾಗಿ ನೀಡುತ್ತಾರಾ? ಎಂದು ಕೇಳಿ ಮಾಹಿತಿ ಪಡೆದುಕೊಂಡರು. ಆಸ್ಪತ್ರೆಯಲ್ಲಿ ನಮಗೆ ಸರಿಯಾದ ಚಿಕಿತ್ಸೆ ದೊರೆಯುತ್ತಿದೆ ಎಂದು ಭಾಣಂತಿಯರು ಪ್ರತಿಕ್ರಿಯಿಸಿದರು.

ರಾತ್ರಿ ವೇಳೆಯಲ್ಲೂ ಚಿಕಿತ್ಸೆ ನೀಡಿ: ಜಿಲ್ಲೆಯ ಯಾವುದೇ ಗ್ರಾಮದಿಂದ ರಾತ್ರಿ ವೇಳೆಯಲ್ಲಿ ತುರ್ತು ಚಿಕಿತ್ಸೆ ಕೋರಿ ಬರುವ ಬಾಣಂತಿಯರಿಗೆ ವೈದ್ಯರು ಮತ್ತು ಆಸ್ಪತ್ರೆಯಲ್ಲಿನ ಸಿಬ್ಬಂದಿ ತಕ್ಷಣವೇ ಸ್ಪಂದನೆ ನೀಡಬೇಕು. ಯಾವುದೇ ನೆಪ ಹೇಳದೇ ಬೇರೆಡೆ ಕಳುಹಿಸಬಾರದು. ಪ್ರಥಮ ಹಂತದ ಚಿಕಿತ್ಸೆಗೆ ಕ್ರಮವಹಿಸಿ, ಹೆಚ್ಚಿನ ಚಿಕಿತ್ಸೆಯ ಅವಶ್ಯವಿದ್ದರೆ ಮಾತ್ರ ಬೇರೆಡೆ ಕಳುಹಿಸಲು ಕ್ರಮವಹಿಸಬೇಕು ಎಂದು ಸಿಇಓ ಅವರು ಇದೆ ವೇಳೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಅಕ್ಕ ಕೆಫೆ ಕಾಮಗಾರಿ ಪರಿಶೀಲನೆ: ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಆವರಣದಲ್ಲಿ ನಿರ್ಮಾಣವಾಗುತ್ತಿರುವ ಅಕ್ಕ ಕೆಫೆ ಕಾಮಗಾರಿಯನ್ನು ಸಿಇಓ ಅವರು ವೀಕ್ಷಣೆ ಮಾಡಿ, ಗುಣಮಟ್ಟದ ಕಾಮಗಾರಿ ನಡೆಸಲು ಸೂಚನೆ ನೀಡಿದರು. ನೂತನ ಪೌಷ್ಟಿಕ ಪುನಶ್ಚೇತನ ಕೇಂದ್ರ ಸ್ಥಾಪನೆಗೆ ಸಿದ್ಧತೆ ಮಾಡಿಕೊಳ್ಳಲು (2ನೇ ಪುಟಕ್ಕೆ)

## ನೌಕರರ ಸಂಘದಿಂದ ನಿರ್ವಾಹಕ ಅಧಿಕಾರಿಗೆ ಮನವಿ



ಯುವಮಾರ್ಗ ಸುದ್ದಿ

**ಮಾನ್ವಿ,ಡಿ.11–** ತಾಲೂಕಿನ ಊಟಕನೂರು ಗ್ರಾಮ ಪಂಚಾಯತಿ ಸಿಬ್ಬಂಧಿ ವೇತನ ತಡೆಹಿಡಿದಿರುವ ಬ್ಯಾಂಕಿನ ಖಾತೆಯನ್ನು ಮರು ಚಾಲನೆ ನೀಡಿ ತಡೆಹಿಡಿರುದಿರುವುದನ್ನು ತೆರವುಗೋಳಿಡಬೇಕೆಂದು ಆಗ್ರಹಹಿಸಿತು.ಉಟಕನೂರು ಗ್ರಾಮ ಪಂಚಾಯತಿಯಲ್ಲಿ ಕಾರ್ಯನಿರ್ವಾಹಿಸುತ್ತಿರುವ ಸಿಬ್ಬಂದಿಗಳಿಗೆ ಅಕ್ಟೋಬರ್ ಮತ್ತು ನವೆಂಬರ್ ತಿಂಗಳ ಇ.ಎಫ್. ಎಂ.ಎಸ್. ವೇತನ ಬಾಕಿ ಇರುತ್ತದೆ. ಸದರಿ ಬಾಕಿ ಇರುವ ಎರಡು ತಿಂಗಳ ವೇತನವನ್ನು ತಮ್ಮ ಆದೇಶದಂತೆ ಮಂಜೂರು ಮಾಡಿರುತ್ತಾರೆ. ಆದರೆ ಸದರಿ ಉಟಕನೂರು ಗ್ರಾಮ ಪಂಚಾಯತಿಯಲ್ಲಿ ಅವ್ಯವಹಾರ ನಡೆದಿದೆ ಎಂದು ಸದರಿ ಪಂಚಾಯತಿಯ ಎಲ್ಲಾ ಸಿಬ್ಬಂಧಿ ವೇತನ ಬ್ಯಾಂಕ್ ಖಾತೆಗಳನ್ನು ಬ್ಲಾಕ್ ಮಾಡಲಾಗಿರುತ್ತದೆ. ಇದರಿಂದ ನಮಗೆ ವೇತನ ಪಡೆಯಲು ತೊಂದರೆಯಾಗಿರುತ್ತದೆ. ಅದಕ್ಕಾಗಿ ನಮ್ಮ ಸಂಘಟನೆಯ ವತಿಯಿಂದ ಉಲ್ಲೇಖ (1) ರನ್ವಯ ಈ ಮೇಲ್ಕಾಣಿಸಿದ ದಿನಾಂಕಗಳಂದು ಮನವಿ ಪತ್ರ ಸಲ್ಲಿಸಿದ್ದು ಇರುತ್ತದೆ.

ತಾವುಗಳು ಉಟಕನೂರು ಗ್ರಾಮ ಪಂಚಾಯತಿಯ ವೇತನ ತಡೆಹಿಡಿದಿರುವ ಬ್ಯಾಂಕಿನ ಖಾತೆಯನ್ನು ಮರು ಚಾಲನೆ ನೀಡಿ ಸಿಬ್ಬಂಧಿಗಳ ಖಾತೆಗಳನ್ನು ತಡೆಹಿಡಿರುದಿರುವುದನ್ನು ತೆರವುಗೊಳಿ ನಮಗೆ ಮಂಜೂರಾದ ವೇತನ ಪಾವತಿ ಮಾಡಿಕೊಳ್ಳಲು ಅನುಕೂಲ ಮಾಡಿ ಕೊಡಬೇಕೆಂದು ಈ ಮೂಲಕ ಕರ್ನಾಟ ರಾಜ್ಯ ಗ್ರಾಮ ಪಂಚಾಯತ ನೌಕರರ ಸಂಘ (ರಿ) (ಸಿ.ಐ.ಟಿ.ಯು ಸಂಯೋಜಿತ) ತಾಲೂಕ ಘಟಕ ಮಾನವಿ ಈ ಮೂಲಕ ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ಮನವಿ ಸಲ್ಲಿಸಿ ಒತ್ತಾಯಿಸಲಾಯಿತು.

ಒಂದು ವೇಳೆ ಈ ನಮ್ಮ ಮನವಿಯನ್ನು ಸ್ವೀಕರಿಸಿ 3 (2ನೇ ಪುಟಕ್ಕೆ...)

## ಕೈಗಾರಿಕೋದ್ಯಮಿಗಳಿಗೆ ಒಂದು ದಿನದ ಕಾರ್ಯಾಗಾರ ಯಶಸ್ವಿ




ಯುವಮಾರ್ಗ ಸುದ್ದಿ

**ರಾಯಚೂರು,ಡಿ.11–** ಜಿಲ್ಲೆಯ ಸಣ್ಣ, ಸೂಕ್ಷ್ಮ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಉತ್ತೇಜನ ನೀಡುವ ಹಾಗೂ ಹೊಸ ಉದ್ಯಮಶೀಲರನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ರಾಯಚೂರಿನ ಜಿಲ್ಲಾ ಕೈಗಾರಿಕಾ ಕೇಂದ್ರ ಮತ್ತು ಬೆಂಗಳೂರಿನ ಭಾರತೀಯ ರಫ್ತು ಉತ್ತೇಜನ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯ ಕೈಗಾರಿಕೋದ್ಯಮಿಗಳಿಗೆ ಒಂದು ದಿನದ ಅರಿವು ಮೂಡಿಸುವ ಕಾರ್ಯಾಗಾರವು ನಗರದ ಹೈದ್ರಾಬಾದ್ ರಸ್ತೆಯ ಜಿಲ್ಲಾ ಕೈಗಾರಿಕಾ ಕೇಂದ್ರದಲ್ಲಿ ಬುಧವಾರ ಯಶಸ್ವಿಯಾಗಿ ನಡೆಯಿತು.

ಬೆಂಗಳೂರಿನ ಫಿವೋ ಉಪ ನಿರ್ದೇಶಕರಾದ ಧನೀಶಾ ಮೀನು ಅವರು ಕಾರ್ಯಕ್ರಮದಲ್ಲಿ ಭಾಗಿಯಾಗಿ ಜಿಲ್ಲೆಯ ಸಣ್ಣ, ಸೂಕ್ಷ್ಮ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಉತ್ತೇಜನ ನೀಡುವ ಹಾಗೂ ಹೊಸ ಉದ್ಯಮಶೀಲರನ್ನು ಪ್ರೋತ್ಸಾಹಿಸುವ ವಿಷಯಗಳು ಮತ್ತು ರಫ್ತು ವ್ಯಾಪಾರದ ಟ್ರೇಡ್ ಪಾಲಿಸಿ–2023ರ ಕುರಿತು ಸವಿಸ್ತಾರವಾಗಿ ಮಾತನಾಡಿದರು.

ಬೆಂಗಳೂರಿನ ಕಸ್ಟಮ್ಸ್ ಹೌಸ್ ಏಜೆಂಟ್ಸ್ ಅಸೋಷಿಯೇಶನ್ ಲಿಮಿಟೆಡ್ ಕಾರ್ಯದರ್ಶಿಗಳಾದ ಗಿರೀಶ್ ನಾರಾಯಣ್ ಅವರು, ರಫ್ತು ವ್ಯಾಪಾರದ ಕುರಿತು ಅಗತ್ಯ ದಾಖಲಾತಿಗಳನ್ನು ಹೇಗೆ ತಯಾರಿಸುವುದು ಹಾಗೂ ಅಂತರಾಷ್ಟ್ರೀಯ ವ್ಯಾಪಾರ, ಸುಂಕ ತೆರಿಗೆ ಈ ವಿಷಯದ ಕುರಿತು ಸವಿಸ್ತಾರವಾಗಿ ಕಾರ್ಯಾಗಾರದಲ್ಲಿ ತಿಳಿಸಿದರು.

ಈ ವೇಳೆ ಹೈದ್ರಾಬಾದಿನ ಇಸಿಜಿಸಿ ಲಿಮಿಟೆಡ್ ಸಹಾಯಕ ವ್ಯವಸ್ಥಾಪಕರಾದ ಭರತ್ ಗುಂಟೂರು ಅವರು ಮಾತನಾಡಿ, ಇನ್ವಾಯಿಸ್, ಪ್ಯಾಕಿಂಗ್ ಲಿಸ್ಟ್, ಕಸ್ಟಮ್ಸ ಕ್ಲೀಯರೆನ್ಸ್, ರಫ್ತು ವಿಮೆ ಮೂಲಕ ಸಿಗುವ ರಕ್ಷಣೆಗಳು, ಲಾಜಿಸ್ಟಿಕ್ಸ್ ಮತ್ತು ಶಿಪ್ಪಿಂಗ್ ಸರಕುಗಳನ್ನು ಸುರಕ್ಷಿತವಾಗಿ ವಿದೇಶಕ್ಕೆ ಕಳುಹಿಸುವ ವಿಧಾನಗಳು ಹಾಗೂ ಡಿಜಿಟಲ್ ಮಾರ್ಕೇಟಿಂಗ್ ಆನ್ ಲೈನ್ ಮೂಲಕ ವಿದೇಶಿ ಗ್ರಾಹಕರನ್ನು ತಲುಪುವುದು ಹೇಗೆ ಎಂಬುದರ ಬಗ್ಗೆ ತಿಳಿಸಿದರು.

ಈ ವೇಳೆ ಬೆಂಗಳೂರಿನ ಎಫ್.ಕೆ.ಸಿ.ಸಿ.ಐ ನಿರ್ದೇಶಕರು ಹಾಗೂ ಜಿಲ್ಲಾ ವಾಣಿಜ್ಯೋದ್ಯಮ ಸಂಘದ ನಿಕಟಪೂರ್ವ ಅಧ್ಯಕ್ಷರಾದ ತ್ರಿವಿಕ್ರಮ ಜೋಶಿ ಅವರು ಮಾತನಾಡಿದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ರಾಯಚೂರು ಕಚೇರಿಯ ಉಪನಿರ್ದೇಶಕರಾದ ಶ್ರೀ ರಾಜಕುಮಾರ್ ಪಾಟೀಲ್ ಇವರು ಪ್ರಾಸ್ತಾವಿಕವಾಗಿ ಮಾತನಾಡಿ, ಇಲಾಖೆಯ ಯೋಜನೆಗಳ ಕುರಿತು ಸವಿಸ್ತಾರವಾಗಿ ತಿಳಿಸಿದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಬಿ. ಸತೀಶಕುಮಾರ್ ಅವರು ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಅಕ್ಕಿ ಗಿರಣಿ ಮಾಲೀಕರ ಸಂಘದ ಅಧ್ಯಕ್ಷರಾದ ಸಾವಿತ್ರಿ ಪುರುಷೋತ್ತಮ್, ಕಾಟನ್ ಮಿಲ್ಲರ್ಸ್ ಸಂಘದ ಅಧ್ಯಕ್ಷರಾದ ವಿ. ಲಕ್ಷ್ಮೀರೆಡ್ಡಿ, ಕಾರ್ಯದರ್ಶಿ ಜಂಬಣ್ಣ ಯಕ್ಲಾಸಪೂರು ಇನ್ನಿತರರು ಇದ್ದರು. ಕಚೇರಿಯ ಸಹಾಯಕ ನಿರ್ದೇಶಕರಾದ ಲಕ್ಷ್ಮೀಕಾಂತ್ ಕುಲಕರ್ಣಿ ವಂದಿಸಿದರು.

## ಟ್ಯಾಕ್ಸ್ ವಸೂಲಾತಿ ಅಭಿಯಾನಕ್ಕೆ ಚಾಲನೆ, ತೆರಿಗೆ ಪಾವತಿಸಿ ಅಭಿವೃದ್ಧಿಗೆ ಸಹಕರಿಸಿ : ಅಮರೇಶ

ಯುವಮಾರ್ಗ ಸುದ್ದಿ

**ಮಸ್ಕಿ,ಡಿ.11–** ಪ್ರತಿಯೊಬ್ಬರು ತೆರಿಗೆ ಪಾವತಿಸುವ ಮೂಲಕ ಗ್ರಾಮೀಣಾಭಿವೃದ್ಧಿಗೆ ಸಹಕರಿಸಬೇಕು ಎಂದು ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ಅಮರೇಶ್ ಸಲಹೆ ನೀಡಿದರು.

ತಾಲೂಕಿನ ಪಾಮನಕಲ್ಲೂರು ಗ್ರಾಮದಲ್ಲಿ ಗುರುವಾರ ತೆರಿಗೆ ವಸೂಲಾತಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ವಿಕೇಂದ್ರಿಕೃತ ಆಡಳಿತ ವ್ಯವಸ್ಥೆಯಲ್ಲಿ ಗ್ರಾಮ ಪಂಚಾಯತಿಗಳ ಪಾತ್ರ ಮಹತ್ವದ್ದಾಗಿದೆ. ಕುಡಿಯುವ ನೀರು ಪೂರೈಕೆ, ಬೀದಿ ದೀಪಗಳು, ಅರಿವು ಕೇಂದ್ರಗಳ ನಿರ್ವಹಣೆ, ಸಮುದಾಯದ ಆರೋಗ್ಯ ಕಾಪಾಡಲು ಕೈಗೊಳ್ಳುವ ಸ್ವಚ್ಛತಾ ಕಾರ್ಯಗಳು ಸೇರಿ ಗ್ರಾಮೀಣ ಪ್ರದೇಶದ ಜನರು ಒಂದಲ್ಲ ಒಂದು ಕಾರ್ಯಕ್ಕೆ ಗ್ರಾಮ ಪಂಚಾಯತಿಗಳನ್ನು ಆಶ್ರಯಿಸುತ್ತಾರೆ. ಈ ಹಿನ್ನಲೆಯಲ್ಲಿ ಗ್ರಾಮ ಪಂಚಾಯತಿಗಳು ಸ್ವಂತ ಸಂಪನ್ಮೂಲಗಳ ಬಳಕೆ ಮೂಲಕ ಸದೃಢವಾಗಿ ಕಾರ್ಯನಿರ್ವಹಿಸುವಂತಾಗಲು ಸ್ಥಳೀಯರ ಸಹಕಾರ ಅಗತ್ಯ. ಹೀಗಾಗಿ, ರಾಯಚೂರು ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಆದೇಶದ ಮೇರೆಗೆ ಪ್ರತಿ ಗುರುವಾರ ತೆರಿಗೆ ವಸೂಲಾತಿ ಅಭಿಯಾನ ಏರ್ಪಡಿಸಲಾಗಿದೆ ಎಂದು ಹೇಳಿದರು. ತಾಲೂಕಿಗೆ ನಿಗದಿಗೊಳಿಸಿದ ಒಂದು ಕೋಟಿ ರೂ. ತೆರಿಗೆ ಸಂಗ್ರಹಕ್ಕೆ ಕ್ರಮಕೈಗೊಳ್ಳಲಾಗುವುದು. ತೆರಿಗೆ ಪಾವತಿಸುವವರಿಗೆ ಗ್ರಾಪಂಯಿಂದ ಡಿಜಿಟಲ್ ರಸೀದಿ ವಿತರಿಸುತ್ತಿದ್ದು, ಆಸ್ತಿಗೆ ಸಂಬಂಧಿಸಿದಂತೆ ಮುಂದೆ ಎದುರಾಗಬಹುದಾದ ತಕಾರರುಗಳಿಗೆ ಸೂಕ್ತ ದಾಖಲೆ ಯಾಗಲಿದೆ. ಹೀಗಾಗಿ ಪ್ರತಿಯೊಬ್ಬರು ತೆರಿಗೆ ಪಾವತಿಸಿ, ಸರ್ಕಾರದ ಆಶಯ ಈಡೇರಿಸಬೇಕು ಎಂದರು. ತದ ನಂತರ ಅಮೀನಗಡ, ವಟಗಲ್, ಹಾಲಾಪುರ, ತೋರಣದಿನ್ನಿ, ಹಿರೇದಿನ್ನಿ, ಮಲ್ಲದಗುಡ್ಡ ಗ್ರಾಪಂಗೆ ಭೇಟಿ ನೀಡಿ, ತೆರಿಗೆ ವಸೂಲಾತಿ ಅಭಿಯಾನವನ್ನು ಖುದ್ದು ಪರಿಶೀಲಿಸಿದರು.



ಸಹಾಯಕ ನಿರ್ದೇಶಕರಾದ (ಪಂ.ರಾ) ಸೋಮನಗೌಡ ಪಾಟೀಲ್ ಸಂತೆಕಲ್ಲೂರು, ಅಂಕುಶದೊಡ್ಡಿ, ಅಡವಿಬಾವಿ (ಮಸ್ಕಿ), ಮಾರಲದಿನ್ನಿ, ಮೆದಕಿನಾಳ, ಕನ್ನಾಳ, ಮಟ್ಟೂರು, ತಲೇಖಾನ್, ಸಹಾಯಕ ನಿರ್ದೇಶಕರಾದ (ಗ್ರಾ.ಉ) ಶಿವಾನಂದರಡ್ಡಿ ಕೊಳಬಾಳ, ಬಪ್ಪೂರು, ಗುಂಡ, ಗುಡದೂರು, ಉದ್ಬಾಳ, ಗೌಡನಬಾವಿ ಗ್ರಾಪಂಗೆ ತೆರಿಗೆ ವಸೂಲಾತಿ ಅಭಿಯಾನದ ನೋಡಲ್ ಅಧಿಕಾರಿಗಳನ್ನಾಗಿ ನಿಯೋಜಿಸಲಾಗಿತ್ತು. ಈ ವೇಳೆ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ಕರವಸೂಲಿಗಾರರು, ಗ್ರಾಪಂ ಸಿಬ್ಬಂದಿ ಇದ್ದರು.

## ಸರಕಾರಿ ಬಿ.ಇಡಿ, ಕಾನೂನು ಪದವಿ ಮಹಾವಿದ್ಯಾಲಯಗಳನ್ನು ಜಾರಿಗೊಳಿಸಲು ಬಂಡೆಗುರು ಕರೇಗುಡ್ಡ ಆಗ್ರಹ

ಯುವಮಾರ್ಗ ಸುದ್ದಿ

**ಮಾನ್ವಿ,ಡಿ.11–**ಸರಕಾರಿ ಬಿ.ಇಡಿ ಮತ್ತು ಸರ್ಕಾರಿ ಕಾನೂನು ಪದವಿ ಮಹಾವಿದ್ಯಾಲಯಗಳನ್ನು ಮಾನ್ವಿ ತಾಲೂಕಿನಲ್ಲಿ ಸಚಿವರು ಮತ್ತು ಶಾಸಕರು ಮಂಜೂರುಗೊಳಿಸಬೇಕೆಂದು ದಲಿತ ವಿದ್ಯಾರ್ಥಿ ಪರಿಷತ್ ತಾಲೂಕು ಸಮಿತಿಯ ಬಂಡೇಗುರು ಕರೇಗುಡ್ಡ ಆಗ್ರಹಿಸಿದರು.

ಮಾನ್ವಿ ನಗರವು ಎಲ್ಲಾ ರಂಗಗಳಲ್ಲೂ ಮುಂದುವರೆದಿರುವ ತಾಲೂಕು ಎನ್ನುವ ಹೆಗ್ಗಳಿಕೆಯನ್ನು ಹೊಂದಿದೆ. ಆದರೆ ಶೈಕ್ಷಣಿಕವಾಗಿ ಇನ್ನೂ ಹೆಚ್ಚಿನ ಅಭಿವೃದ್ಧಿ



ಹೊಂದಬೇಕಾಗಿದೆ. ಆ ನಿಟ್ಟಿನಲ್ಲಿ ನಮ್ಮ ತಾಲೂಕಿಗೆ ಸರ್ಕಾರಿ ಬಿ.ಇಡಿ ಕಾಲೇಜು ಮತ್ತು ಸರ್ಕಾರಿ ಕಾನೂನು ಮಹಾವಿದ್ಯಾಲಯದ ಅವಶ್ಯ ಮತ್ತು ಈ ಭಾಗದ ಅಸಂಖ್ಯಾತ ವಿದ್ಯಾರ್ಥಿಗಳ ಬಹುದೊಡ್ಡ ಬೇಡಿಕೆಯಾಗಿದೆ. ಈ ಎರಡು ಕಾಲೇಜುಗಳನ್ನು ನಮ್ಮ ತಾಲೂಕಿಗೆ ಸರ್ಕಾರದಿಂದ ಮಂಜೂರು ಮಾಡಿಸಿದರೆ ವಿದ್ಯಾರ್ಥಿಗಳು ಬೇರೊಂದು ತಾಲೂಕು ಅಥವಾ ಜಿಲ್ಲೆಗಳಿಗೆ ವಿದ್ಯಾಭ್ಯಾಸಕ್ಕಾಗಿ ವಲಸೆ ಹೋಗುವ ಅವಶ್ಯಕತೆ ಇರುವುದಿಲ್ಲ. ಆದ್ದರಿಂದಾಗಿ ನಮ್ಮ ತಾಲೂಕಿಗೆ ಈ ಎರಡು ಕಾಲೇಜುಗಳನ್ನು ಮಂಜೂರು ಮಾಡಿಸಲು ಬೆಳಗಾವಿಯಲ್ಲಿ ನಡೆದಿರುವ ಅಧಿವೇಶನ ದಲ್ಲಿ ಧ್ವನಿ ಎತ್ತಿ, ನಮ್ಮ ಭಾಗದ ಸಹಸ್ರ ಸಹಸ್ರ ವಿದ್ಯಾರ್ಥಿಗಳ ಬೇಡಿಕೆಯನ್ನು ಈಡೇರಿಸಲು ದಲಿತ ವಿದ್ಯಾರ್ಥಿ ಪರಿಷತ್ ವತಿಯಿಂದ ಆಗ್ರಹಿಸಲಾಯಿತು

## ಮೊದಲನೇಯ ಪುಟದಿಂದ

# ತಾಯಿ, ಮಕ್ಕಳ ಆಸ್ಪತ್ರೆಗೆ ಜಿಪಂ ಸಿಇಓ ಈಶ್ವರ ಕಾಂದೂ ದಿಢೀರ್ ಭೇಟಿ; ಪರಿಶೀಲನೆ

ಇದೆ ವೇಳೆ ಸಿಇಓ ಅವರು ತಿಳಿಸಿದರು. ಮಕ್ಕಳ ಆರೈಕೆಗೆ ಹಾಗೂ ಎಸ್‌ಎನ್‌ಸಿಯು ಘಟಕಕ್ಕೆ ಬೇಕಾಗುವ ಪರಿಕರಗಳ ಖರೀದಿಗೆ ಬೇಡಿಕೆ ಪತ್ರವನ್ನು ಕೂಡಲೇ ಸಲ್ಲಿಸುವಂತೆ ಸೂಚಿಸಿ, ತಾಯಿ ಮಕ್ಕಳ ಆರೈಕೆಯ ಸೇವೆಗಳಿಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಬಸವರಾಜ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ, ಹಾಗೂ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ.ಪ್ರಜ್ವಲ್ ಸೇರಿದಂತೆ ಇನ್ನಿತರ ವೈದ್ಯರು ಮತ್ತು ಸಿಬ್ಬಂದಿ ಇದ್ದರು.

# ನೌಕರರ ಸಂಘದಿಂದ ನಿರ್ವಾಹಕ ಅಧಿಕಾರಿಗೆ ಮನವಿ

ದಿನಗಳೊಳಗಾಗಿ ಸಿಬ್ಬಂದಿ ವೇತನವನ್ನು ಪಾವತಿಸುವಲ್ಲಿ ವಿಳಂಭ ತೋರಿದ್ದಲ್ಲಿ ತಮ್ಮ ಗ್ರಾಮ ಪಂಚಾಯತಿ ಕಾರ್ಯಾಲಯದ ಮುಂದೆ ಕಾರ್ಯ ಸ್ಥಗಿತಗೊಳಿಸಿ ಧರಣಿ ಹಮ್ಮಿಕೊಳ್ಳಲಾಗುವುದೆಂದು ಈ ಮೂಲಕ ತಮಗೆ ತಿಳಿಯಬಯಸುತ್ತೇವೆ. ಈ ಸಂದರ್ಭದಲ್ಲಿ ಅಂಬಣ್ಣ ನಾಯಕ ಅಧ್ಯಕ್ಷರು ಕರ್ನಾಟಕ ರಾಜ್ಯ ಗ್ರಾಮ ಪಂಚಾಯತ್ ನೌಕರರ ಸಂಘ (ರಿ) ಮಾನ್ವಿ, ಪ್ರಧಾನ ಕಾರ್ಯದರ್ಶಿಯಾದ ಸುಭಾನ್ ಚಿಕ್ಕೋಟ್ನೆಕಲ್, ಕಾರ್ಯಧಕ್ಷರು ಮಹಮ್ಮದ್ ನೀರಮಾನ್ವಿ ಇನ್ನಿತರರು

# ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಅಂತರ ಮಹಾವಿದ್ಯಾಲಯಗಳ ಪಂದ್ಯಾವಳಿ ಯಶಸ್ವಿ





ಯುವಮಾರ್ಗ ಸುದ್ದಿ

**ರಾಯಚೂರು,ಡಿ.11–** ಇಲ್ಲಿನ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವ್ಯಾಪ್ತಿಯ ಏಳು ಕೃಷಿ ಮಹಾವಿದ್ಯಾಲಯಗಳ ಅಂತರ ಮಹಾವಿದ್ಯಾಲಯ ಗುಂಪು ಪಂದ್ಯಾವಳಿಗಳು ರಾಯಚೂರಿನ ಕೃ.ವಿ.ವಿಯ ಆವರಣದಲ್ಲಿ ಕೃಷಿ ತಾಂತ್ರಿಕ ಮಹಾವಿದ್ಯಾಲಯದ ವತಿಯಿಂದ ಡಿಸೆಂಬರ್ 6 ರಿಂದ 10ರವರೆಗೆ ಯಶಸ್ವಿಯಾಗಿ ನಡೆದವು.

2025–26ನೇ ಸಾಲಿನ ಅಂತರ ಮಹಾವಿದ್ಯಾಲಯಗಳ ಪುರುಷರ ಹಾಗೂ ಮಹಿಳೆಯರ ಟೇಬಲ್ ಟೇನ್ನಿಸ್, ಕಬಡ್ಡಿ, ವಾಲಿಬಾಲ್ ಮತ್ತು ಖೋ–ಖೋ ಸ್ಪರ್ಧೆಗಳಲ್ಲಿ ಏಳು ಕೃಷಿ, ಸ್ನಾತಕೋತ್ತರ ಮಹಾವಿದ್ಯಾಲಯಗಳಿಂದ 320 ಪುರುಷ ಮತ್ತು 200 ಮಹಿಳಾ ಕ್ರೀಡಾ ಪಟುಗಳು ಭಾಗವಹಿಸಿದ್ದರು.

ಪುರುಷರ ಟೇಬಲ್ ಟೇನ್ನಿಸ್ ವಿಭಾಗದಲ್ಲಿ ರಾಯಚೂರಿನ ಕೃವಿವಿಯ ಸ್ನಾತಕೋತ್ತರ ವಿಭಾಗವು ಚಾಂಪಿಯನ್ ಹಾಗೂ ಭೀಮರಾಯನಗುಡಿ ಕೃಷಿ ಮಹಾವಿದ್ಯಾಲಯವು ರನ್ ಆಫ್ ಸ್ಥಾನ ಪಡೆದವು. ಮಹಿಳೆಯರ ಟೇಬಲ್ ಟೇನ್ನಿಸ್ ವಿಭಾಗದಲ್ಲಿ ರಾಯಚೂರಿನ ಕೃಷಿ ತಾಂತ್ರಿಕ ಮಹಾವಿದ್ಯಾಲಯವು ಚಾಂಪಿಯನ್ ಹಾಗೂ ಗಂಗಾವತಿ ಕೃಷಿ ಮಹಾವಿದ್ಯಾಲಯವು ರನ್ ಆಫ್ ಸ್ಥಾನ ಪಡೆದವು. ಪುರುಷರ ಕಬಡ್ಡಿ ವಿಭಾಗದಲ್ಲಿ ರಾಯಚೂರಿನ ಕೃಷಿ ಮಹಾವಿದ್ಯಾಲಯವು ಚಾಂಪಿಯನ್ ಹಾಗೂ ಗಂಗಾವತಿ ಕೃಷಿ ಮಹಾವಿದ್ಯಾಲಯವು ರನ್ ಆಫ್ ಸ್ಥಾನ ಪಡೆದವು. ಪುರುಷರ ವಾಲಿಬಾಲ್ ವಿಭಾಗದಲ್ಲಿ ರಾಯಚೂರಿನ ಸ್ನಾತಕೋತ್ತರ ವಿಭಾಗವು ಚಾಂಪಿಯನ್ ಹಾಗೂ ರಾಯಚೂರಿನ ತಾಂತ್ರಿಕ ಕೃಷಿ ಮಹಾವಿದ್ಯಾಲಯವು ರನ್ ಆಫ್ ಸ್ಥಾನ ಪಡೆದವು.

ಮಹಿಳೆಯರ ವಾಲಿಬಾಲ್ ವಿಭಾಗದಲ್ಲಿ ಗಂಗಾವತಿಯ ಕೃಷಿ ಮಹಾವಿದ್ಯಾಲಯವು ಚಾಂಪಿಯನ್ ಹಾಗೂ ಕಲಬುರಗಿ ಕೃಷಿ ಮಹಾವಿದ್ಯಾಲಯವು ರನ್ ಆಫ್ ಸ್ಥಾನ ಪಡೆದವು. ಪುರುಷರ ಖೋ–ಖೋ ವಿಭಾಗದಲ್ಲಿ ರಾಯಚೂರಿನ ತಾಂತ್ರಿಕ ಕೃಷಿ ಮಹಾವಿದ್ಯಾಲಯವು ಚಾಂಪಿಯನ್ ಹಾಗೂ ರಾಯಚೂರಿನ ಕೃಷಿ ಮಹಾವಿದ್ಯಾಲಯವು ರನ್ ಆಫ್ ಸ್ಥಾನ ಪಡೆದವು. ಮಹಿಳೆಯರ ಖೋ–ಖೋ ವಿಭಾಗದಲ್ಲಿ ಕಲಬುರಗಿಯ ಕೃಷಿ ಮಹಾವಿದ್ಯಾಲಯವು ಚಾಂಪಿಯನ್ ಹಾಗೂ ರಾಯಚೂರಿನ ಕೃಷಿ ಮಹಾವಿದ್ಯಾಲಯವು ರನ್ ಆಫ್ ಸ್ಥಾನ ಪಡೆದವು. ಡಿ.10ರಂದು ಸಮಾರೋಪ ಸಮಾರಂಭ ನಡೆಯಿತು. ಕುಲಪತಿ ಡಾ.ಎಂ.ಹನುಮಂತಪ್ಪ ಅವರು ಮಾತನಾಡಿ, ಕ್ರೀಡಾ

# ನಂದಾಗೆ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ

**ಬೀದರ್: ಡಿ.11–**ಡಿಸೆಂಬರ್ 9ರಂದು ನಗರದ ಪೂಜ್ಯ ಚನ್ನಬಸವ ಪಟ್ಟದ್ದೇವರು ಜಿಲ್ಲಾ ರಂಗಮಂದಿರದಲ್ಲಿ ವಿಶ್ವ ಕನ್ನಡಿಗರ ಸಂಸ್ಥೆ ಕರ್ನಾಟಕ ವತಿಯಿಂದ ಗಡಿ ಕನ್ನಡಿಗರ ಉತ್ಸವ ಮತ್ತು 70ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವು ಬಹು ವಿಜ್ರಂಭಣೆಯಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಬೀದರ ತಾಲೂಕಿನ ಸಾತೋಳಿ ಗ್ರಾಮದ ಪ್ರಾಥಮಿಕ ಶಾಲೆಯ ಶಿಕ್ಷಕಿಯಾದ ಶ್ರೀಮತಿ ನಂದಾ ಬಾಬುರಾವ್ ಗೊಂಡ ಅವರಿಗೆ ಕರ್ನಾಟಕ ರಾಜ್ಯೋತ್ಸವ ರತ್ನ ಪ್ರಶಸ್ತಿಯನ್ನು ಪ್ರಧಾನ ಮಾಡಿ ಗೌರವಿಸಲಾಯಿತು. ಕಾರಣವಾಗಿ ಜಿಲ್ಲೆಯ ಸಾಹಿತಿಗಳಾದ ಎಂ.ಜಿ.ದೇಶಪಾಂಡೆ, ಓಂಕಾರ್ ಉಪ್ಪೆ, ಶ್ರೀಮತಿ ಶ್ರೇಯಾ ಮಹೇಂದ್ರಕರ್, ಸಾಧನಾ ರಂಜೋಳ್ಕರ್, ಜಗದೇವಿ ದುಬುಲಗುಂಡೆ, ಪುಷ್ಪಾ ಕನಕ, ಸ್ವರೂಪರಾಣಿ, ಬಾಬುರಾವ್ ಮುಧಾಳೆ, ರಮೇಶ್ ಇಟಗಿ, ಸಿದ್ರಾಮಪ್ಪ ಬುಳ್ಳಾ, ಶರಣಪ್ಪ ಕುಶನೂರ್ , ಆನಂದ್ ಕುಮಾರ, ಶರಣಪ್ಪ ಬೀರಕೂರ, ಗಂಗಾಧರ್ ತಡಕಲ, ಧನರಾಜ ನಿಡೋದೇ, ಲಕ್ಷ್ಮಿಕಾಂತ್ ಕುಲಕರ್ಣಿ, ಕಿರಣ ಮಹಾರಾಜ ಮುಂತಾದವರು ಅಭಿನಂದಿಸಿದ್ದಾರೆ.

# ಬೆಳ್ಳಂಬೆಳಿಗ್ಗೆ ಬಸ್ ಘಟಕಕ್ಕೆ ಮುತ್ತಿಗೆ ಹಾಕಿ ವಿದ್ಯಾರ್ಥಿಗಳಿಂದ ಪ್ರತಿಭಟನೆ



**ಔರಾದ್ :ಡಿ.11–** ಬೆಳಗಿನ ಮೈ ಕೊರೆಯುವ ಚಳಿಯಲ್ಲಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಕಾರ್ಯಕರ್ತರು ಹಾಗೂ ಶಾಲಾ–ಕಾಲೇಜು ವಿದ್ಯಾರ್ಥಿಗಳು ಬಸ್ ಘಟಕಕ್ಕೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಪಟ್ಟಣದ ಬಸ್ ಘಟಕಕ್ಕೆ ಬೆಳಗಿನ ಜಾವ 6 ಗಂಟೆಗೆ ಆಗಮಿಸಿದ ವಿದ್ಯಾರ್ಥಿಗಳು ಅಧಿಕಾರಿಗಳ ವಿರುದ್ಧ ಘೋಷಣೆ ಕೂಗುವ ಮೂಲಕ ಆಕ್ರೋಶ ಹೊರ ಹಾಕಿದ್ದಾರೆ, ಶಾಲಾ ಕಾಲೇಜುಗಳಿಗೆ ತೆರಳಲು ಸಮರ್ಪಕ ಬಸ್ ವ್ಯವಸ್ಥೆ ಇಲ್ಲದೆ ಮಕ್ಕಳು ತರಗತಿಗಳಿಂದ ವಂಚಿತರಾಗುತ್ತಿದ್ದಾರೆ, ತಾಲೂಕಿನ ಬಹುತೇಕ ಬಸ್ ವ್ಯವಸ್ಥೆ ಇಲ್ಲದೆ ಮಕ್ಕಳು ಕಾಲ್ನಡಿಗೆಯಲ್ಲಿ ಬರುತ್ತಾರೆ, ಬಂದರು ಸಹ ಸರಿಯಾದ ಸಮಯಕ್ಕೆ ಬಸ್ ಸಿಗುವುದಿಲ್ಲ, ವಿದ್ಯಾಭ್ಯಾಸ ಮಾಡಿ ಭವಿಷ್ಯ ರೂಪಿಸಿಕೊಳ್ಳುವ ವಿದ್ಯಾರ್ಥಿಗಳು ಬಸ್ ಸಂಚಾರದಲ್ಲಿಯೇ ಕಾಲ ಕಳೆಯುವಂತಾಗಿದೆ. ಶಾಲಾ ಕಾಲೇಜಿನ ಸಮಯಕ್ಕೆ ಸರಿಯಾಗಿ ಬಸ್ ಬರುತ್ತಿಲ್ಲ ಸಮಯ ಪಾಲನೆ ಮಾಡದೆ ಸಾರಿಗೆ ಅಧಿಕಾರಿಗಳು ಮಕ್ಕಳ ಭವಿಷ್ಯದ ಜೊತೆ ಆಟ ಆಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ವಿದ್ಯಾರ್ಥಿ ಪರಿಷತ್ ಮುಖಂಡ ಶಿವಶರಣ ಚಾಂಬೋಳೆ ಅವರು ಮಾತನಾಡಿ ಅಧಿಕಾರಿಗಳು ಸರಿಯಾದ ಸಮಯಕ್ಕೆ ಸಮರ್ಪಕ ಬಸ್ ವ್ಯವಸ್ಥೆ ಕಲ್ಪಿಸದೆ ವಿದ್ಯಾರ್ಥಿಗಳ ಭವಿಷ್ಯದ ಜೊತೆ ಆಟ ಆಡುತ್ತಿದ್ದಾರೆ, ಇದರಿಂದ ಮಕ್ಕಳ ಶಿಕ್ಷಣಕ್ಕೆ ಪೆಟ್ಟು ಬೀಳುತ್ತಿದೆ ಮುಂದಿನ ದಿನಗಳಲ್ಲಿ ಇದೇ ರೀತಿ ಮುಂದುವರಿದರೆ ರಾಜ್ಯವ್ಯಾಪಿ ಹೋರಾಟ ಮಾಡಲಾಗುತ್ತದೆ ಎಂದು ಎಚ್ಚರಿಸಿದರು.

ವಿದ್ಯಾರ್ಥಿ ಮುಖಂಡ ಅಶೋಕ ಶೆಂಬೆಳ್ಳಿ ಅವರು ಮಾತನಾಡಿ ಸಾರಿಗೆ ವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ ಯಾರು ಕೂಡ ಸಮಯ ಪಾಲನೆ ಮಾಡುತ್ತಿಲ್ಲ ನಿಗದಿತ ಸಮಯಕ್ಕೆ ಸರಿಯಾಗಿ ಬಸ್ ಸಂಚಾರ ಆಗದೆ ವಿದ್ಯಾರ್ಥಿಗಳು ದಿನನಿತ್ಯ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ, ಔರಾದ–ಬೀದರ ಹೋಗುವ ವಿದ್ಯಾರ್ಥಿಗಳು ದಿನನಿತ್ಯ ತೊಂದರೆ ಅನುಭವಿಸುವಂತಾಗಿದೆ, ಕೂಡಲೇ ಅಧಿಕಾರಿಗಳು ವ್ಯವಸ್ಥೆ ಸರಿಪಡಿಸಿ ವಿದ್ಯಾರ್ಥಿಗಳ ಬೇಡಿಕೆ ಈಡೇರಿಸಬೇಕು ಎಂದು ಒತ್ತಾಯಿಸಿದರು.

ಈ ವೇಳೆ ವಿಭಾಗೀಯ ರಾಜೇಂದ್ರ ಜಾಧವ ವಿದ್ಯಾರ್ಥಿಗಳ ಮನವಲಿಸಿ ಒಂದು ವಾರದ ಒಳಗೆ ವ್ಯವಸ್ಥೆ ಸರಿಪಡಿಸಲಾಗುವುದು ಎಂದು ಮನವಿ ಮಾಡಿದರು. ಪಿಎಸ್‌ಐ ವಸೀಂ ಪಟೇಲ ಅವರು ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಿದರು.

ಈ ಸಂಧರ್ಭದಲ್ಲಿ ಮಂಜುನಾಥ, ಅಂಬಾದಾಸ ನಳಗೆ, ಮಲ್ಲಿಕಾರ್ಜುನ ಟೆಕರಾಜ, ಅನಿಲ ಮೇತ್ರೆ, ಮಹಾದೇವ ಶಿಂಧೆ, ಶ್ರೀಕಾಂತ ಎಡವೆ, ನಿತೀನ ಮೂಲಗೆ, ಪ್ರಶಾಂತ ಮೇತ್ರೆ, ಮಾರುತಿ ಉದಗಿರೆ, ಪ್ರೇಮ, ಅಜಯ ಸೇರಿದಂತೆ ಅನೇಕ ಶಾಲಾ ಕಾಲೇಜು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

**ವಿದ್ಯಾರ್ಥಿಗಳ ಬೇಡಿಕೆಗಳು**

ಔರಾದ–ಬೀದರ್ ಮಾರ್ಗಕ್ಕೆ ಬೆಳಿಗ್ಗೆ 6 ರಿಂದ 10 ಗಂಟೆ ಹಾಗೂ ಸಾಯಂಕಾಲ ಬರಲು ಬಸ್ ವ್ಯವಸ್ಥೆ ಮಾಡಬೇಕು.

ಔರಾದ–ಬೀದರ ಮಾರ್ಗದಲ್ಲಿ ಸಂಚರಿಸುವ ಎಲ್ಲ ತಡೆರಹಿತ – ತಡೆಸಹಿತ ಬಸ್ಸುಗಳಲ್ಲಿ ವಿದ್ಯಾರ್ಥಿಗಳಿಗೆ ಪಾಸ್ ಅನುಮತಿ ನೀಡಬೇಕು.

ಲಿಂಗಿ, ಬಸನಾಳ, ಸಂಗನಾಳ, ಮುಧೋಳ(ಕೆ), ಭೋಪಳಗಾಂವ ಗ್ರಾಮಗಳಿಗೆ ಹೊಸ ಬಸ್ ನೀಡಬೇಕು.

ಯನಗುಂದಾ, ಭವಾನಿಬಿಜಲಗಾಂವ, ಮುಕ್ರಂಬಾದ, ಡೋಣಗಾಂವ ಬಸ್ ಸಂಚಾರ ನಿಗದಿತ ಸಮಯಕ್ಕೆ ಆಗಬೇಕು.

ಗಣೇಶಪೂರ(ಯು) ಗ್ರಾಮದ ವಿದ್ಯಾರ್ಥಿಗಳು 4 ಕಿಲೋಮೀಟರ್ ನಡೆದುಕೊಂಡು ಬರುತ್ತಾರೆ ಅಲ್ಲಿ ಬಸ್ಸಿನ ವ್ಯವಸ್ಥೆ ಕಲ್ಪಿಸಬೇಕು.

# ಫಲಿತಾಂಶ ಸುಧಾರಣೆಗೆ ಪ್ರಯತ್ನ ಮಾಡೋಣ:ಪಂಡಿತರಾವ ಪವ್ಹಾರ

**ಸೈದಾಪುರ:ಡಿ.11–**ಜಿಲ್ಲೆಯ ಫಲಿತಾಂಶ ಸುಧಾರಣೆಗೆ ನಾವೆಲ್ಲರೂ ಪ್ರಯತ್ನ ಮಾಡೋಣ ಇದಕ್ಕಾಗಿ ಯೋಜನೆಯನ್ನು ರೂಪಿಸಿಕೊಂಡು ಕಾರ್ಯನಿರ್ವಹಿಸಿ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಜಿಲ್ಲಾ ಉಪನಿರ್ದೇಕರಾದ ಪಂಡಿತರಾವ ಪವ್ಹಾರ ಅಭಿಪ್ರಾಯಪಟ್ಟರು.

ಪಟ್ಟಣದ ಮಲ್ಹಾರ ಕಾರೆಡ್ಡಿ ಬಸವಂತರಾಯ ಮತ್ತು ಸಿದ್ದಪ್ಪ ಸ್ಮಾರಕ ವಿದ್ಯಾ ವರ್ಧಕ ಕಲಾ ಪದವಿ ಪೂರ್ವ ಕಾಲೇಜಿಗೆ ಭೇಟಿ ನೀಡಿ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳೊಂದಿಗೆ ಸಂವಾದ ಮಾಡಿ ಮಾತನಾ ಡಿದರು. ಶಿಕ್ಷಣ ಇಲಾಖೆ ಇಗಾಗಲೇ ವಿಷಯವಾರು ನೀಲ ನಕ್ಷೆ ಸೇರಿದಂತೆ ವಿವಿಧ ಅನುಕೂಲತೆಗಳನ್ನು ಕಲ್ಪಿಸಿದೆ. ಇದರ ಸರಿಯಾದ ಸದುಪಯೋಗ ಪಡೆದುಕೊಂಡು ಶೈಕ್ಷಣಿಕ ಅಭಿವೃ ದ್ದಿಗಾಗಿ ಪ್ರಯತ್ನ ಮಾಡಬೇಕಾಗಿದೆ.

ಕಾಲೇಜಿಗೆ ಭೇಟಿ ನೀಡಿದಾಗ ವಿದ್ಯಾರ್ಥಿಗಳ ದಾಖಲಾತಿ ಉತ್ತಮವಾಗಿದ್ದೂ ಇನ್ನೂ ಹೆಚ್ಚಿನ ಶೈಕ್ಷಣಿಕ ಸಾಧನೆ ನಿಮ್ಮದಾಗಲಿ ಎಂದು ಹಾರೈಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಸಿಬ್ಬಂದಿ ಮನುಪಾಟೀಲ, ಪ್ರಾಂಶುಪಾಲ ಜಿ.ಎಂ.ಗುರುಪ್ರಸಾದ, ಹಂಪಣ್ಣ ಸಜ್ಜನಶೆಟ್ಟಿ, ದೇವಿಂದ್ರ ಪೀರಾ, ಚಂದ್ರಶೇಖರ ಡೊಣ್ಣೆಗೌಡ, ಬಸವರಾಜ ಭರಮಶೆಟ್ಟಿ, ಶಾಂತಲಾ.ಎನ್, ಇಂದಿರಾ ತೂರೆ, ರಾಜಶೇಖರ ಪಾಟೀಲ, ಅನುರಾಧ ಸೇರಿದಂತೆ ಇತರರಿದ್ದರು.

## ಆದಿಕವಿ ಶ್ರೀಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದಲ್ಲಿ ಒಂದು ದಿನದ ಯುವ ರೆಡ್ ಕ್ರಾಸ್ ಕಾರ್ಯಾಗಾರ

# ಯುವ ರೆಡ್ ಕ್ರಾಸ್ ಸಂಸ್ಥೆಯ ನಿಸ್ವಾರ್ಥ ಸೇವೆ ಶ್ಲಾಘನೀಯ – ಪ್ರೊ. ಶಿವಾನಂದ ಕೆಳಗಿನಮನಿ

ಯುವಮಾರ್ಗ ಸುದ್ದಿ

**ರಾಯಚೂರು, ಡಿ.11–** ಮಾನವಿಯ ತತ್ವಗಳನ್ನು ಎತ್ತಿ ಹಿಡಿಯಲು ಯುವಜನರನ್ನು ಪ್ರೇರೆಪಿಸಲು ಮತ್ತು ಸಬಲೀಕರಣಗೊಳಿಸಲು ನೆರವಾಗುತ್ತಿರುವ ಮತ್ತು ನಿಸ್ವಾರ್ಥವಾಗಿ ಸಲ್ಲಿಸುತ್ತಿರುವ ಯುವ ರೆಡ್ ಕ್ರಾಸ್ ಸಂಸ್ಥೆಯ ಸೇವೆ ನಿಜಕ್ಕೂ ಶ್ಲಾಘನೀಯ ಎಂದು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶಿವಾನಂದ ಕೆಳಗಿನಮನಿ ಹೇಳಿದರು.

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯ ಹಾಗೂ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ರಾಯಚೂರು ಸಹಯೋಗದಲ್ಲಿ ವಿವಿ ಸಭಾಂಗಣದಲ್ಲಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಅಡಿಯಲ್ಲಿ ಬರುವ ವಿವಿಧ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಹಾಗೂ ಯುವ ರೆಡ್ ಕ್ರಾಸ್ ಕಾರ್ಯಕ್ರಮ ಅಧಿಕಾರಿಗಳಿಗಾಗಿ ಹಮ್ಮಿಕೊಂಡ ಒಂದು ದಿನದ ಯುವ ರೆಡ್ ಕ್ರಾಸ್ ಕಾರ್ಯಾಗಾರ ವನ್ನು ಯುವ ರೆಡ್ ಕ್ರಾಸ್ ಸಂಸ್ಥೆ ಸಂಸ್ಥಾಪಕ ಜೀನ್ ಹೆನ್ರಿ ಡುನಾಂಟ್‌ರವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವುದರ ಮೂಲಕ ಮಾತನಾಡಿದ ಅವರು, ಯುವಜನರಲ್ಲಿ ಸ್ವಯಂ ಸೇವಾ ಮನೋಭಾವ, ಆರೋಗ್ಯ ಜಾಗೃತಿ ಮತ್ತು ಸಾಮಾಜಿಕ ಜವಾಬ್ದಾರಿಯ ಮನೋಭಾವವನ್ನು ಬೆಳೆಸುವ ಗುರಿಯನ್ನು ವೈ.ಆರ್.ಸಿ. ಹೊಂದಿದ್ದು, ಬಹುತೇಕವಾಗಿ ಅನಾರೋಗ್ಯದಿಂದ ಬಳಲುತ್ತಿರುವ ಜನಸಾಮಾನ್ಯರಿಗೆ ಆಶ್ರಯ ತಾಣವಾಗಿದೆ ಹಾಗೂ ವಿದ್ಯಾರ್ಥಿಗಳನ್ನು ಸಮಾಜದ ಕಾಲಜಿವುಳ್ಳ ನಾಗರಿಕರನ್ನಾಗಿ ರೂಪಿಸಲು ಅವರಿಗೆ ಪ್ರಥಮ ಚಿಕಿತ್ಸೆ, ಆರೋಗ್ಯ, ನೈರ್ಮಲ್ಯ ಮತ್ತು ವಿಪತ್ತು ನಿರ್ವಹಣೆಯಲ್ಲಿ ತರಬೇತಿ ನೀಡುವ ಉದ್ದೇಶ ಹೊಂದಿದ್ದು, ಕಾರ್ಯಗಾರದ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಶುಭಾಶಯ ಹೇಳುತ್ತಾ ಅಧ್ಯಕ್ಷೀಯ ನುಡಿಗಳನ್ನಾಡಿದರು.

'ಯುತ್ ರೆಡ್ ಕ್ರಾಸ್ ಸ್ವಯಂಸೇವೆ, ಏಕತೆ ಮತ್ತು ವಿಶ್ವವ್ಯಾಪಕತೆ ಮೈಗೂಡಿಸುವ ಗುರಿ ಹೊಂದಿದೆ. ವಿದ್ಯಾರ್ಥಿ ಯುವ ಸಂಪನ್ಮೂಲವನ್ನು ಅಭಿವೃದ್ಧಿಪಡಿಸುವ ಮತ್ತು ಯುತ್ ರೆಡ್ ಕ್ರಾಸ್‌ನ ತತ್ವಗಳನ್ನು ಕಾರ್ಯರೂಪಕ್ಕಿಳಿಸುವ ಉದ್ದೇಶದಿಂದ ಈ ಸಂಸ್ಥೆ ಸಂಘಟಿಸಲಾಗಿ ಯುವ ಜನರಲ್ಲಿ ಆದರ್ಶ ಮನೋಭಾ ವವನ್ನು ಮೂಡಿಸುವ ಹಾಗೂ ನಾಗರೀಕ ಹೊಣೆಗಾ ರಿಕೆಯನ್ನು ಅರ್ಥ ಮಾಡಿಸಿ ಕೊಡುವ ಕಾರ್ಯವನ್ನು ಯುತ್ ರೆಡ್ ಕ್ರಾಸ್ ಮಾಡುತ್ತಿದೆ ಎಂದು ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಕರ್ನಾಟಕ ಶಾಖೆ ಬೆಂಗಳೂರಿನ ನಿರ್ದೇಶಕ ವಿಜಯಕು ಮಾರ ಪಾಟೀಲ್ ಶಾವಂತಗೇರ ಅವರು ತಮ್ಮ ಉದ್ಘಾಟಕ ನುಡಿಗಳಲ್ಲಿ ತಿಳಿಸಿದರು.



ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಕರ್ನಾಟಕ ಶಾಖೆ ಬೆಂಗಳೂರಿನ ಪ್ರಧಾನ ಉಮಾಕಾಂತ, ಕಾರ್ಯಗಾರದ ಕಾರ್ಯದರ್ಶಿ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದರು ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಕರ್ನಾಟಕ ಶಾಖೆ ಬೆಂಗಳೂರಿನ ಸಂಯೋಜಕ ಆನಂದ ತರಬೇತಿ ನೀಡಿದರು. ಕಾರ್ಯಕ್ರಮದಲ್ಲಿ ವಿ.ವಿ ಕುಲಸಚಿವ ಡಾ.ಎ.ಚನ್ನಪ್ಪ, ಉಪ ಕುಲಸಚಿವ ಡಾ.ಕೆ. ವೆಂಕಟೇಶ, ರೆಡ್‌ಕ್ರಾಸ್‌ನ ಜಿಲ್ಲಾ ಕಾರ್ಯದರ್ಶಿ ಅತಾವುಲ್ಲಾ, ಪದಾಧಿಕಾರಿಗ ಳಾದ ಶೇಖ್ ಮೆಹಬೂಬ್, ಜಿ.ಎಸ್ ಹಿರೇಮಠ, ಮಹಿಬೂಬ್ ಮದ್ಲಾಪುರ, ಬ್ಲಡ್ ಬ್ಯಾಂಕ್ ನ ಅಮರೇಶ್, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿವಿಯ ಎಸ್ ಎಸ್ ಸಂಯೋಜನಾಧಿಕಾರಿ ಡಾ. ಜಿ.ಎಸ್ .ಬಿರಾದಾರ್, ಡೀನರು ಹಾಗೂ ಹಿರಿಯ ಪ್ರಾಧ್ಯಾಪಕ ಪ್ರೊ.ಪಿ.ಭಾಸ್ಕರ್ ಸೇರಿದಂತೆ ವಿವಿಧ ಕಾಲೇಜುಗಳ ಪ್ರಾಂಶುಪಾಲರು, ಯುತ್ ರೆಡ್ ಕ್ರಾಸ್ ಸಂಯೋಜ ನಾಧಿಕಾರಿ ಗಳು, ಪದಾಧಿ ಕಾರಿಗಳು ಹಾಗೂ ಸದಸ್ಯರು ಹಾಗೂ ವಾಲ್ಮೀಕಿ ವಿವಿಯ ವಿವಿಧ ವಿಭಾಗಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಶ್ರೀಮಂತ ಮಲೆ ಮಹದೇಶ್ವರ ಸ್ವಾಮಿ : 28 ದಿನದಲ್ಲಿ 2.53 ಕೋಟಿ ರೂ. ಕಾಣಿಕೆ ಸಂಗ್ರಹ

**ಹನೂರು,ಡಿ.11–** ತಾಲ್ಲೂಕಿನ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟ ಮಾದಪ್ಪನ ದೇಗುಲದಲ್ಲಿ ಹುಂಡಿ ಹಣ ಎಣಿಕೆ ನಡೆದಿದ್ದು 28 ದಿನಗಳಲ್ಲಿ 2.53 ಕೋಟಿ ರೂ. ಸಂಗ್ರಹವಾಗಿದ್ದು ಮಾದಪ್ಪ ಮತ್ತೆ ಕೋಟ್ಯಾಧಿಪತಿ ಆಗಿರುವುದಲ್ಲದೆ ವಿದೇಶಿ ಹಣ ಸಂಪನ್ನಗಾರರಾಗಿದ್ದಾನೆ.

ಸಾಲೂರು ಬೃಹನತಾಧ್ಯಕ್ಷರಾದ ಶ್ರೀಶಾಂತ ಮಲ್ಲಿಕಾರ್ಜುನ ಸ್ವಾಮೀಜಿಯವರ ಉಪಸ್ಥಿತಿಯಲ್ಲಿ ಶ್ರೀಮಲೆ ಮಹದೇಶ್ವರಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ರಘು ರವರ ನೇತೃತ್ವದಲ್ಲಿ ಹುಂಡಿ ಹಣ ಎಣಿಕೆ ಕಾರ್ಯ ನಡೆದಿದ್ದು 28 ದಿನಗಳಲ್ಲಿ 2,53,98,859 ಕೋಟಿ ರೂ. ನಗದು (ಹುಂಡಿ ಮತ್ತು ಇ–ಹುಂಡಿ ಸೇರಿ) ಹಾಗೂ ಚಿನ್ನ 25 ಗ್ರಾಂ, ಬೆಳ್ಳಿ 01.253 ಕೆಜಿ, 16 ವಿದೇಶಿ ನೋಟು, 2 ಸಾವಿರ ಮುಖ ಬೆಲೆ 3 ನೋಟುಗಳು ಹುಂಡಿಯಲ್ಲಿ ದೊರೆತಿವೆ.

ಈ ಬಾರಿಯೂ ಭಕ್ತರಿಂದ ಹರಕೆ ರೂಪದಲ್ಲಿ ಇಷ್ಟೊಂದು ದೊಡ್ಡ ಮೊತ್ತದ ಕಾಣಿಕೆ ಸಂಧಿರುವುದು ಶಕ್ತಿ ಯೋಜನೆಯಡಿ ಮಹಿಳೆಯರ ಉಚಿತ ಪ್ರಯಾಣ ರಜಾ ದಿನಗಳು ವಿದೇಶಿ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಶ್ರೀ ಕ್ಷೇತ್ರಕ್ಕೆ ಬೇಟಿ ನೀಡಿದ್ದರಿಂದ ಹೆಚ್ಚು ಹಣ ಸಂಗ್ರಹವಾಗಿದೆ.



ಮ. ಬೆಟ್ಟ ಬಸ್ ನಿಲ್ದಾಣದ ವಾಣಿಜ್ಯ ಕಟ್ಟಡದಲ್ಲಿ ಸಿಸಿ ಕ್ಯಾಮರಗಳ ಕಣ್ಗಾವಲಿನಲ್ಲಿ ಹಾಗೂ ಮ.ಬೆಟ್ಟ ಠಾಣೆ ಪೊಲೀಸ್ ಬಂದೋಬಸ್ತಿನಲ್ಲಿ ಪ್ರಾಧಿಕಾರದ ಸಿಬ್ಬಂಧಿಗಳು ಹಾಗೂ ಕೊಳ್ಳೆಗಾಲ ಬ್ಯಾಂಕ್ ಆಫ್ ಬರೋಡ ಸ್ಥಳೀಯ ಶಾಖೆ ಸಿಬ್ಬಂಧಿಗಳು ಹುಂಡಿ ಎಣಿಕೆ ಕಾರ್ಯದಲ್ಲಿ ತೊಡಗಿದ್ದರು.

ಹುಂಡಿ ಎಣಿಕೆ ಕಾರ್ಯದಲ್ಲಿ ಪ್ರಾಧಿಕಾರದ ಉಪ ಕಾರ್ಯದರ್ಶಿ ಚಂದ್ರಶೇಖರ.ಜಿ.ಎಲ್, ಲೆಕ್ಕಾಧೀಕ್ಷಕ ಗುರುಮಲ್ಲಯ್ಯ ಚಾ.ನಗರ ಜಿಲ್ಲಾಡಳಿತ ಕಛೇರಿ ಭಾರತಿ ಪ್ರಾಧಿಕಾರದ ಹಣಕಾಸು ಮತ್ತು ಲೆಕ್ಕಪತ್ರ ಸಲಹೆಗಾರ ಮಹದೇವು ಪ್ರಾಧಿಕಾರದ ಸಿಬ್ಬಂದಿಗಳು ಮ.ಬೆಟ್ಟ ಪೊಲೀಸ್ ಅಧಿಕಾರಿಗಳು ಮತ್ತು ಸರಗೂರು

# ಬಿಡಿಎ ಕಾರ್ಯಾಚರಣೆ: 140 ಕೋಟಿ ರೂ. ಆಸ್ತಿವಶ

**ಬೆಂಗಳೂರು,ಡಿ.11–** ಅಭಿವೃದ್ಧಿ ಪ್ರಾಧಿಕಾರವು ಅನಧಿಕೃತ ಕಟ್ಟಡ ನಿರ್ಮಾಣಗಳನ್ನು ತೆರವುಗೊಳಿಸುವ ಕಾರ್ಯಾಚರಣೆ ಮುಂದುವರೆಸಿದ್ದು, ಇಂದು ನಡೆದ ಮಾಳಗಾಲದಲ್ಲಿ ಕಾರ್ಯಾಚರಣೆ ನಡೆಸಿ, 140 ಕೋಟಿ ರೂ. ಆಸ್ತಿಯನ್ನು ವಶಪಡಿಸಿಕೊಂಡಿದೆ.

ಬೆಂಗೂರು ಉತ್ತರ ತಾಲ್ಲೂಕು, ಯಶವಂತಪುರ ಹೋಬಳಿ, ನಾಗರಭಾವಿ ಗ್ರಾಮದ ಸರ್ವೆ ನಂ. 17 ರಲ್ಲಿ 2 ಎಕರೆ 30ಗುಂಟೆ ಪ್ರದೇಶದಲ್ಲಿ ಅನಧಿಕೃವಾಗಿ ನಿರ್ಮಾಣಗಳನ್ನು ತೆರವುಗೊಳಿಸಿ, ಸುಮಾರು 140 ಕೋಟಿ ಮೌಲ್ಯದ ಪ್ರದೇಶವನ್ನು ಪ್ರಾಧಿಕಾರವು ವಶಪಡಿಸಿಕೊಂಡಿತು.

ಈ ಕಾರ್ಯಾಚರಣೆಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಕಾರ್ಯನಿರತ ಪಡೆಯ ಆರಕ್ಷಕ ಅಧೀಕ್ಷಕರು, ಅಭಿಯಂತರ ಅಧಿಕಾರಿ–1, ಪಶ್ಚಿಮ ವಿಭಾಗದ ಕಾರ್ಯಪಾಲಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರೊಂದಿಗೆ ಕಾರ್ಯಾಚರಣೆ ನಡೆಸಲಾಯಿತು.



# ಡಿ.ಕೆ.ಶಿವಕುಮಾರ್ ಸಿಎಂ ಕುರ್ಚಿ ಕನಸಿನ ಕುರಿತು ವಿಧಾನಸಭೆಯಲ್ಲಿ ಸ್ವಾರಸ್ಯಕರ ಚರ್ಚೆ



**ಬೆಳಗಾವಿ, ಡಿ.11–** ಕಾಣುವ ಕುರ್ಚಿಯಲ್ಲಿ ಕೂರಬಲ್ಲನೆ ಒಂದು ದಿನ ಎಂಬ ಕನಸಿನಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಮ್ಮ ದೈನಂದಿನ ಶೈಲಿಯನ್ನು ಬದಲಾಯಿಸಿ ನಯ–ವಿನಯ ರೂಢಿಸಿಕೊಳ್ಳುತ್ತಿದ್ದಾರೆ ಎಂದು ವಿರೋಧ ಪಕ್ಷದ ಸದಸ್ಯರು ವ್ಯಂಗ್ಯವಾಡಿದ ಪ್ರಸಂಗ ನಡೆಯಿತು.

ವಿಧಾನಸಭೆಯಲ್ಲಿ ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ್, ಉತ್ತರ ಕರ್ನಾಟಕ ಭಾಗದ ಅಭಿವೃದ್ಧಿ ಕುರಿತಂತೆ ಚರ್ಚೆ ಮಾಡುವಾಗ ಮೇಕೆದಾಟು ಯೋಜನೆ ಮುಂದಿಟ್ಟುಕೊಂಡು ಹೋರಾಟ ಮಾಡಿ, ಕಾಂಗ್ರೆಸ್ ಪಕ್ಷ ಮತ ಪಡೆದು ಗೆದ್ದಿದೆ. ಸುಪ್ರಿ?ಂಕೋರ್ಟ್ ಈಗ ತಮಿಳುನಾಡಿನ ರಿಟ್ ಅರ್ಜಿಯನ್ನು ವಜಾಗೊಳಿಸಿದೆ. ಇನ್ನೂ ಮುಂದಾದರು ರಾಜ್ಯ ಸರ್ಕಾರ ಮೇಕೆದಾಟು ಯೋಜನೆಯನ್ನು ಪ್ರಾರಂಭ ಮಾಡಲಿ ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಧ್ಯಪ್ರವೇಶಿಸಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಅರವಿಂದ್ ಬೆಲ್ಲದ್ ಅವರು ಮುಖ್ಯಮಂತ್ರಿಯಾಗಲು, ಅನಂತರ ವಿರೋಧ ಪಕ್ಷದ ನಾಯಕರಾಗುವ ಪ್ರಯತ್ನ ನಡೆಸಿದ್ದರು. ಅವರಿಗೆ ಅನುಭವ ಇದೆ. ನಾನು ಅರವಿಂದ್ ಅವರ ತಂದೆಯವರ ಜೊತೆ ಶಾಸಕನಾಗಿ ಕೆಲಸ ಮಾಡಿದೇನೆ. ರಾಜ್ಯ ಸರ್ಕಾರದ ಪ್ರಯತ್ನದಿಂದಾಗಿ ಸುಪ್ರಿಂ ಕೋರ್ಟ್ ತೀರ್ಪು ನೀಡಿದೆ. ಮೇಕೆದಾಟು ಯೋಜನೆಗೆ ಆರು ತಿಂಗಳ ಒಳಗಾಗಿ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಸಿಡಬ್ಲ್ಯೂಸಿ ನಿರ್ದೇಶನ ನೀಡಿದೆ. ಯೋಜನೆ ವಿಚಾರದಲ್ಲಿ ಮೂಗು ತೂರಿಸಲು ಬಯಸುವುದಿಲ್ಲ, ಅಷ್ಟು ತಾಂತ್ರಿಕತೆ ನ್ಯಾಯಾಲಯಕ್ಕೆ ಇಲ್ಲ ಎಂದು ಸುಪ್ರಿ?ಂ ಕೋರ್ಟ್ ಹೇಳಿದ್ದು, ಸರ್ಕಾರವೇ ನಿರ್ಧಾರ ತೆಗೆದುಕೊಳ್ಳಬೇಕು ಎಂದಿದೆ.

ನಾನು ನಿಮೆಲ್ಲರಿಗೂ ನಮ್ರತೆಯಿಂದ ಕೈ ಮುಗಿದು ಕೇಳಿಕೊಳ್ಳುತ್ತೇನೆ. ಸಿಡಬ್ಲ್ಯೂಸಿ ಮುಂದೆ ಎಲ್ಲಾ ದಾಖಲೆಗಳನ್ನು ಮಂಡಿಸುತ್ತೇನೆ. ಪರಿಷ್ಕೃತ ಯೋಜನಾ ವರದಿಯನ್ನು ಸಲ್ಲಿಸುತ್ತೇನೆ. ಎಲ್ಲರೂ ಸೇರಿ ಕೇಂದ್ರ ಸರ್ಕಾರದಿಂದ ಅನುಮತಿ ಕೊಡಿಸಿದರೆ. ನಿಮೆಲ್ಲರನ್ನು ಕರೆದುಕೊಂಡು ಹೋಗಿ ಯೋಜನೆಗೆ ಭೂಮಿ ಪೂಜೆ ಮಾಡುತ್ತೇನೆ ಎಂದು ಕೈ ಮುಗಿದು ಕೇಳಿಕೊಂಡರು.

ತಕ್ಷಣವೇ ಇದಕ್ಕೆ ಪ್ರತಿಕ್ರಿಯಿಸಿದ ಬಿಜೆಪಿಯ ವಿ.ಸುನಿಲ್ ಕುಮಾರ್ ಇಷ್ಟು ನಯ–ವಿನಯ ಅದೆಲ್ಲಿಂದ ಬಂತು. ಕೈಮುಗಿದು ನಯ–ವಿನಯವಾಗಿ ಕೇಳುತ್ತಿದ್ದಾರೆ. ಇದು ನಿಜವಾದ ಡಿ.ಕೆ. ಶಿವಕುಮಾರ್ ಅವರೇನಾ ? ಅಥವಾ ಹೊಸ ರೂಪವೇ ಎಂದು ಪ್ರಶ್ನಿಸಿದರು.

ನಿಮಿಂದಲೇ ಇದೆಲ್ಲಾ ಕಲಿತಿದ್ದಾಗಿ ಡಿ.ಕೆ.ಶಿವಕುಮಾರ್ ಹೇಳಿದರು. ಇದನ್ನು ಒಪ್ಪದಾ ಸುನಿಲ್ ಕುಮಾರ್, ನಮಗೆಲ್ಲ ಡಿ.ಕೆ.ಶಿವಕುಮಾರ್ ಎಂದರೆ ಒಂದು ಕಲ್ಪನೆ ಇದೆ. ಇಷ್ಟು ನಯ–ವಿನಯ ಹೇಗೆ ಬಂತು ಎಂದು ಪದೇ ಪದೇ ಕೇಳಿದರು.

ಸಿ.ಅಶ್ವಥ್ ಅವರ ಒಂದು ಹಾಡಿದೆ. ಅದರಲ್ಲಿ ಕಾಣದ ಕಡಲಿಗೆ ಹಂಬಲಿಸಿದೆ ಮನ. ಸೇರಬಲ್ಲನೆ ಒಂದು ದಿನ ಎಂಬ ಸುಂದರ ಸಾಲುಗಳಿವೆ. ಈಗ ಡಿ.ಕೆ.ಶಿವಕುಮಾರ್ ಅವರು ಕಾಣುವ ಕುರ್ಚಿಗೆ ಹಂಬಲಿಸಿದೆ ಮನ, ಕೂರಬಲ್ಲನೆ ಒಂದು ದಿನ, ಕೂರಬಲ್ಲನೆ ಒಂದು ದಿನ ಎಂದು ಹಾಡಲು ಹೊರಟಿದ್ದಾರೆ. ಹೀಗಾಗಿ ನಯ–ವಿನಯ ಶುರುವಾಗಿದೆಯೇ ಅಥವಾ ನಿಜವಾಗಿಯೂ ನೀರಾವರಿ ಯೋಜನೆಗಳ ಕಾಳಜಿಯೇ ಅಥವಾ ವಿರೋಧ ಪಕ್ಷಗಳ ಬಗ್ಗೆ ನಯ–ವಿನಯವೋ ಎಂದು ಲೇವಡಿ ಮಾಡಿದರು.

ನಾವು ನಿಮ ಗತ್ತು ಗೈರತ್ತಿನ ನಾಯಕತ್ವ ಒಪ್ಪಿಕೊಂಡಿದ್ದೇವೆ. ಈಗ ಕೈ ಮುಗಿದು ನಯ–ವಿನಯ ತೋರಿಸಿದರೆ ಹೇಗೆ ಎಂದು ಪ್ರಶ್ನಿಸಿದರು.ಇದು ಮೇಕೆದಾಟು ಯೋಜನೆಗೆ ಮಾತ್ರ ಎಂದು ಕಾಂಗ್ರೆಸ್ ಶಾಸಕ ಬೇಳೂರು ಗೋಪಾಲಕೃಷ್ಣ ಹೇಳಿದರು.ಹಿರಿಯ ಸದಸ್ಯ ಎಸ್.ಸುರೇಶ್ ಕುಮಾರ್, ಇಮೇಜ್ ಮೇಕ್ ಓವರ್ ಗಾಗಿ ಕೆಲವು ಸಂಸ್ಥೆಗಳ ನೆರವು ಪಡೆಯಲಾಗುತ್ತದೆ. ಸಲಹೆಗಳು ಇರುತ್ತವೆ. ಡಿ.ಕೆ.ಶಿವಕುಮಾರ್ ಅವರು ಕೊರಳಿಗೆ ಶಲ್ಯ ಹಾಕಿಕೊಂಡಿರುವುದು ಕೂಡ ಇದರ ಭಾಗವೇ ಎಂದು ಕೇಳಿದರು.

ಅರವಿಂದ್ ಬೆಲ್ಲದ್, ಕೇಂದ್ರದಲ್ಲಿ ಜಲಶಕ್ತಿ ಸಚಿವರಾಗಿರುವ ಸಿ.ಆರ್.ಪಾಟೀಲ್ ಅವರೊಂದಿಗೆ ಡಿ.ಕೆ.ಶಿವಕುಮಾರ್ ಅವರಿಗೆ ಉತ್ತಮ ಬಾಂಧವ್ಯ ಇದೆ. ಅದನ್ನು ಮೇಕೆದಾಟು ಯೋಜನೆಗೆ ಬಳಸಿಕೊಳ್ಳಲಿ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಮತ್ತೆ ಎದ್ದು ನಿಂತ ಡಿ.ಕೆ.ಶಿವಕುಮಾರ್, ನಾವು ನೀವು ಎಲ್ಲರಿಗೂ ಕಾವೇರಿ, ಮಹದಾಯಿ, ಕೃಷ್ಣ ಯೋಜನೆಗಳು ಬೇಕು. ನಾವೆಲ್ಲರೂ ಹೋರಾಡುವುದು ಜನರಿಗಾಗಿ, ಒಟ್ಟಾಗಿ ಕೆಲಸ ಮಾಡೋಣ. ಜೊತೆಗೂಡುವುದು ಆರಂಭ, ಜೊತೆಗೂಡಿ ಚರ್ಚಿಸುವುದು ಪ್ರಗತಿ, ಜೊತೆಗೂಡಿ ಕೆಲಸ ಮಾಡುವುದು ಯಶಸ್ಸು ಎಂದರು.

# 2.84 ಲಕ್ಷ ಖಾಲಿ ಹುದ್ದೆ ಭರ್ತಿಗೆ ಕ್ರಮ

**ಬೆಂಗಳೂರು,ಡಿ.11–**ರಾಜ್ಯದ ಕೃಷಿ, ಇಂಧನ, ಸಾರಿಗೆ,ಆರೋಗ್ಯ,ಶಿಕ್ಷಣ ಸೇರಿ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ 2ಲಕ್ಷ 84 ಸಾವಿರ 881 ಹುದ್ದೆಗಳನ್ನು ಹಂತಹಂತವಾಗಿ ಭರ್ತಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೇಲ್ಮನೆಯಲ್ಲಿ ತಿಳಿಸಿದರು.



ಪ್ರಶ್ನೋತ್ತರ ವೇಳೆಯಲ್ಲಿ ಇಂದು ಬಿಜೆಪಿಯ ಹನುಮಂತ ನಿರಾಣಿ ಅವರ ಪ್ರಶ್ನೆಗೆ ಉತ್ತರ ನೀಡಿದ ಮುಖ್ಯಮಂತ್ರಿಗಳು ಒಳ ಮೀಸಲಾತಿ ಜಾರಿಯ ವಿಳಂಬದಿಂದ ಖಾಲಿ ಹುದ್ದೆಗಳ ಭರ್ತಿಗೆ ತಡವಾಗಿತ್ತು ಎಂದು ಹೇಳಿದರು.

ಈಗಾಗಲೇ ಒಳ ಮೀಸಲಾತಿ ಜಾರಿಯಾಗಿರುವುದರಿಂದ ಖಾಲಿ ಹುದ್ದೆಗಳ ನೇಮಕಾತಿಯು ವೇಗವಾಗಲಿದೆ ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಹಂತಹಂತವಾಗಿ ಭರ್ತಿ ಮಾಡಲಾಗುವುದು ಎಂದು ತಿಳಿಸಿದರು. ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಹುದ್ದೆಗಳ ಭರ್ತಿಯನ್ನು ವೃಂದ ಮತ್ತು ನೇಮಕಾತಿ ನಿಯಮಗಳ್ವಯ ಆರ್ಥಿಕ ಇಲಾಖೆಯಿಂದ ಅನುಮೋದಿತವಾದ ಹುದ್ದೆಗಳನ್ನು ಕಾಲಕಾಲಕ್ಕೆ ಭರ್ತಿ ಮಾಡಲು ನಿಯಮಾನುಸಾರ ಕ್ರಮಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಕಳೆದ 3 ವರ್ಷಗಳಲ್ಲಿ ವಿವಿಧ ನೇಮಕಾತಿ ಪ್ರಾಧಿಕಾರಗಳ ಮೂಲಕ 8157 ಹುದ್ದೆಗಳ ನೇಮಕಾತಿಯನ್ನು ಪೂರ್ಣಗೊಳಿಸಲಾಗಿದೆ ಹಾಗೂ 3081 ಹುದ್ದೆಗಳ ನೇಮಕಾತಿಯು ಪ್ರಗತಿಯಲ್ಲಿದೆ ಎಂದರು. ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ 24300 ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯು ನೀಡಿದೆ,ಅಧಿಕಾರಿ / ನೌಕರರ ನಿಧನ, ವಯೋ ನಿವೃತ್ತಿ ಮತ್ತು ಸ್ವಯಂ ನಿವೃತ್ತಿಯಿಂದ ತೆರವಾಗುವ ಹುದ್ದೆಗಳನ್ನು ಆಯಾ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಆರ್ಥಿಕ ಇಲಾಖೆಯಿಂದ ಅನುಮೋದನೆ ಮಾಡಲಾಗುತ್ತಿದೆ.

ಇಲಾಖೆಗಳು ಖಾಲಿ ಇರುವ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯಿಂದ ಒಂದು ಬಾರಿ ಸಹಮತಿಯನ್ನು ಪಡೆದ ನಂತರ, ಮತ್ತೊಮ್ಮೆ ಸಹಮತಿಯನ್ನು ಕೋರುವ ಅಗತ್ಯವಿರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

# ಪೊಲೀಸ್ ಮುಂಬಡ್ತಿ ಅನುಪಾತ ಹೆಚ್ಚಳಕ್ಕೆ ಕ್ರಮ

**ಬೆಂಗಳೂರು,ಡಿ.11–**ದೈಹಿಕ ಸಧೃಡತೆ ಹೊಂದಿರುವುದು, ಯುವಕರು ಬರಬೇಕೆನ್ನುವ ಕಾರಣಕ್ಕೆ ಮುಂಬಡ್ತಿ ನೀಡುವಾಗ ಶೇ70–30ರ ಅನುಪಾತವನ್ನು ಪೊಲೀಸ್ ಇಲಾಖೆಯಲ್ಲಿ ಅಳವಡಿಸಿದ್ದು, ಇದನ್ನು ಬದಲಾವಣೆ ಮಾಡಲು ಅಗತ್ಯಬಿದ್ದರೆ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಮೇಲ್ಮನೆಯಲ್ಲಿ ತಿಳಿಸಿದರು.



ಪ್ರಶ್ನೋತ್ತರ ವೇಳೆಯಲ್ಲಿ ಕಾಂಗ್ರೆಸ್ ನ ಡಿ.ಟಿ.ಶ್ರೀನಿವಾಸ್ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು ನೇಮಕಾತಿಗೊಂಡ ಪೇದೆಗಳು ಹೆಚ್ಚಿನ ವಿದ್ಯಾಭ್ಯಾಸ ಹೊಂದಿದ್ದರೆ ಅವರಿಗೆ ಪಿಎಸ್ ಐ ಹುದ್ದೆಗಳ ನೇಮಕಾತಿಯಲ್ಲಿ 7 ವರ್ಷಗಳವರೆಗೆ ಅವಕಾಶ ನೀಡಲಾಗುವುದು ಎಂದು ಹೇಳಿದರು.

ಕ್ರೀಡಾಪಟುಗಳಿಗೆ ಪೊಲೀಸ್ ಸಿಬ್ಬಂದಿಯ ನೇಮಕಾತಿಯಲ್ಲಿ ಶೇ 3 ರಷ್ಟು ಹುದ್ದೆಗಳನ್ನು ಮೀಸಲಿಡಲಾಗಿದೆ ಪದವೀಧರ, ಸ್ನಾತಕೋತ್ತರ ಪದವೀಧರರು ಹೆಚ್ಚು ಪೊಲೀಸ್ ಸಿಬ್ಬಂದಿಯಾಗಿ ನೇಮಕಾತಿಗೊಳ್ಳುತ್ತಿದ್ದಾರೆ ಎಂದು ತಿಳಿಸಿದರು.

ಪೊಲೀಸ್ ಇಲಾಖೆಯ ಎಎಸ್ಐ ಮತ್ತು ಸಿಬ್ಬಂದಿಗಳು ಪಿಎಸ್ ಐ ವೃಂದದ ಪತ್ರಾಂಕಿತ ರಜಾ ದಿವಸಗಳಲ್ಲಿ ಕಾರ್ಯನಿರ್ವಹಿಸಿದ್ದಕ್ಕೆ 15 ದಿವಸಗಳ ವೇತನವನ್ನು 30 ದಿವಸಗಳ ಪರಿಷ್ಕರಿಸುವ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ ಎಂದು ಹೇಳಿದರು.

ಎಎಸ್ಐ ರವರುಗಳಿಗೆ ಪಿಎಸ್ಐ ಮುಂಬಡ್ತಿ ಹುದ್ದೆಯ ರಿಕ್ತಸ್ಥಾನಕ್ಕೆ ಅನುಗುಣವಾಗಿ ಜೇಷ್ಠತೆಯ ಆಧಾರದ ಮೇಲೆ ವೃಂದ ಮತ್ತು ನೇಮಕಾತಿ ನಿಯಮಾನುಸಾರ ಕನಿಷ್ಟ ವರ್ಷಗಳ ಸೇವೆಯನ್ನು ಪೂರೈಸಿರುವ ಅರ್ಹ 4 ಎಎಸ್ಐ ರವರುಗಳಿಗೆ ಪಿಎಸ್ಐ ಹುದ್ದೆಗೆ ಮುಂಬಡ್ತಿ ನೀಡಲಾಗುತ್ತದೆ.

ಸುಮಾರು 29 ವರ್ಷಗಳು ಇಲಾಖೆಯಲ್ಲಿ ಸೇವೆ ಸಲ್ಲಿಸಿರುವ ಹಾಗೂ ಎಎಸ್ ಐ ಹುದ್ದೆಯಲ್ಲಿ 5 ವರ್ಷ 10 ತಿಂಗಳು ಸೇವೆಯನ್ನು ಪೂರೈಸಿರುವ ಎಎಸ್ ಐ ಗಳಿಗೆ ಮುಂಬಡ್ತಿ ನೀಡಲಾಗುತ್ತಿದೆ ಎಂದರು.

ಕಾನೂನು ಮತ್ತು ಸುವ್ಯವಸ್ಥೆಯ ನಿರ್ವಹಣೆ, ಅಪರಾಧ ತಡೆಗಟ್ಟುವಿಕೆ, ಅಪರಾಧ ಪ್ರಕರಣಗಳ ಪತ್ತೆ ಮತ್ತು ತನಿಖೆ, ಸಂಚಾರ ನಿರ್ವಹಣೆಯ ಕರ್ತವ್ಯ ನಿರ್ವಹಿಸಲು ದೈಹಿಕವಾಗಿ ಯುವ ಮತ್ತು ಮಾನಸಿಕವಾಗಿ ಸದೃಢರಾದ ಹಾಗೂ ತಾಂತ್ರಿಕ ನೈಪುಣ್ಯತೆಯುಳ್ಳ ಅಧಿಕಾರಿಗಳ ಅವಶ್ಯಕತೆ ಇರುತ್ತದೆ.

ಅಲ್ಲದೇ ಇತ್ತೀಚಿನ ದಿನಗಳಲ್ಲಿ ಅಪರಾಧ ಪ್ರಕರಣಗಳು ಹೆಚ್ಚಿನ ತಾಂತ್ರಿಕತೆಯಿಂದ ಕೂಡಿದ್ದು, ಇಂತಹ ಪ್ರಕರಣಗಳ ಪತ್ತೆಗೆ ಹೆಚ್ಚಿನ ತಾಂತ್ರಿಕ ವಿದ್ಯಾರ್ಹತೆಯುಳ್ಳ ಯುವಕರ ಅವಶ್ಯಕತೆ ಇರುವುದರಿಂದ ಮುಂಬಡ್ತಿಯಲ್ಲಿ ಯುವಕರಿಗೆ ಅವಕಾಶ ನೀಡಲಾಗುತ್ತಿದೆ ಎಂದು ಹೇಳಿದರು.

ಸಾಮಾನ್ಯವಾಗಿ ಪೊಲೀಸ್ ಕಾನ್ಸ್–ಟೇಬಲ್ ವೃಂದದ ಸಿಬ್ಬಂದಿಗಳು ಕ್ರಮವಾಗಿ ಹೆಡ್ ಕಾನ್ಸ್ ಟೇಬಲ್ ಮತ್ತು ಎಎಸ್ಐ ಹುದ್ದೆಗಳಿಗೆ 2 ಮುಂಬಡ್ತಿಯನ್ನು ಹೊಂದಿ ನಂತರ ಪಿಎಸ್ಐ(ಸಿವಿಲ್) ಹುದ್ದೆಗೆ ಅರ್ಹರಾಗುತ್ತಾರೆ. ಇವರ ಶಿಕ್ಷಣವು ಮೂಲ ಹುದ್ದೆಯ ಕನಿಷ್ಠ ಮಟ್ಟದ್ದಾಗಿರುವುದರಿಂದ ವರದಿಯಾಗುತ್ತಿರುವ ಅಪರಾಧ ಪ್ರಕರಣ ಬೇಧಿಸುವುದು ಕಷ್ಟಸಾಧ್ಯವಾಗಿರುತ್ತದೆ ಎಂದು ತಿಳಿಸಿದರು.

ಪೊಲೀಸ್ ಇಲಾಖೆಯ ಕಾರ್ಯ ನಿರ್ವಹಣೆ ಹಾಗೂ ಇತರ ಇಲಾಖೆಗಳ ಕಾರ್ಯನಿರ್ವಹಣೆಗೂ ಸಾಕಷ್ಟು ವ್ಯತ್ಯಾಸವಿರುವುದರಿಂದ ಪೊಲೀಸ್ ಇಲಾಖೆಯ ಪಿಎಸ್ಐ ಹುದ್ದೆಯನ್ನು ಇತರ ಇಲಾಖೆಯ ಹುದ್ದೆಗಳೊಂದಿಗೆ ಹೊಲಿಸುವುದು ಸೂಕ್ತವಾಗಿರುವುದಿಲ್ಲ. ಹಿನ್ನಲೆಯಲ್ಲಿ ನಿಯಮಗಳಲ್ಲಿ ಪಿಎಸ್ಐ ಹುದ್ದೆಗೆ ಇಲಾಖೆಯ ವೃಂದ ಮತ್ತು ನೇಮಕಾತಿ ಅನುಭವವುಳ್ಳ ಮತ್ತು ಯುವ ಅಧಿಕಾರಿಗಳನ್ನು ಪರಿಗಣಿಸಿ ನೇರ ನೇಮಕಾತಿ ಮತ್ತು ಮುಂಬಡ್ತಿಗೆ ಶೇಕಡ 70:30 ನಿಗದಿಪಡಿಸಲಾಗಿದೆ ಎಂದು ವಿವರಿಸಿದರು.

# ನಮ್ಮಲ್ಲೂ ಕನ್ನಡ ಪರ ಹೋರಾಟಗಾರರಿದ್ದಾರೆ



**ಬೆಂಗಳೂರು, ಡಿ. 11–** ಕನ್ನಡ ನಾಡಿನ ಮಣ್ಣಿನಲ್ಲಿ ಹುಟ್ಟಿ, ನಾಡಿನ ಮಣ್ಣಿಗಾಗಿ ತಮ್ಮ ಜೀವನವನ್ನು ಮುಡುಪಾಗಿ ಇಟ್ಟಿರುವ ಹಲವಾರು ಕನ್ನಡ ಪರ ಹೋರಾಟಗಾರರು ನಮ್ಮಲ್ಲಿ ಇದ್ದಾರೆ ಎಂದು ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿಯವರು ತಿಳಿಸಿದರು.

ನಗರದ ಕನ್ನಡ ಭವನದ ನಯನ ಸಭಾಂಗಣದಲ್ಲಿ ವಿಶ್ವಮಾನವ ರಾಷ್ಟ್ರಕವಿ ಕುವೆಂಪು ಕಲಾನಿಕೇತನ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಕನ್ನಡ ಪರ ಹೋರಾಟಗಾರರಾದ ಜಾಣಗೆರೆ ವೆಂಕಟರಾಮಯ್ಯ, ವ.ಚ. ಚನ್ನೇಗೌಡ ಮತ್ತು ಎ. ಅಮೃತ್‌ರಾಜ್ ರವರಿಗೆ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ನಾಡ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಅವರು ನಾವು ಹೇಗೆ ಬದುಕಬೇಕು ಎಂಬುದನ್ನು ಕಲಿಯಬೇಕು. ಕುವೆಂಪುರವರ ಪ್ರಜ್ಞೆಯನ್ನು ಇಂದಿನ ಯುವಕರಲ್ಲಿ ಅರಿವು ಮೂಡಿಸಬೇಕು ಎಂದು ತಿಳಿಸಿದರು.

ರಾಜಋಷಿ ನಾಲ್ವಡಿ ಕೃಷ್ಣರಾಜ ಒಡೆಯರ್‌ರವರ ಸ್ವಂತ ಒಡವೆ ಮಾರಿ ಅಣೆಕಟ್ಟು ಕಟ್ಟಿದರು ಅದರೆ ಅವರ ಆದರ್ಶ ಯಾರು ಪಾಲಿಸುತ್ತಿದ್ದಾರೆ. ಬಸವೇಶ್ವರರು, ಅಂಬೇಡ್ಕರ್ ಮತ್ತು ಕುವೆಂಪುರವರ ಚಿಂತನೆಗಳನ್ನು ಆಳವಡಿಸಿಕೊಂಡರೆ ಸಮ ಸಮಾಜ ನಿರ್ಮಾಣ ಸಾಧ್ಯವೆಂದರು.

ವಿಶ್ರಾಂತ ನ್ಯಾಯಮೂರ್ತಿಗಳಾದ ವಿ.ಗೋಪಾಲಗೌಡರು ಮಾತನಾಡಿ ಕನ್ನಡ ನಾಡಿನ ಅಭಿವೃದ್ಧಿ, ಸಾಹಿತ್ಯ, ಸಂಸ್ಕೃತಿ ಬೆಳೆಯಲು ಆನೇಕ ಮಹನೀಯರುಗಳು ಕೊಡುಗೆ ನೀಡಿದ್ದಾರೆ. ಕುವೆಂಪು ಪ್ರಗತಿಪರ ಕವಿಯಾಗಿದ್ದರು, ರಾಮಾಯಣ ದರ್ಶನಂ ಓದಿದಾಗ ಜೀವನ ಅರ್ಥ ತಿಳಿಯತ್ತದೆ. ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಬಸವೇಶ್ವರ ಸಿದ್ದಾಂತ, ಕಾಲ್ ಮಾರ್ಕ್ಸ್ ಸಿದ್ದಾಂತಗಳು ಅವರ ಸಾಹಿತ್ಯದಲ್ಲಿ ನೋಡಬಹುದು ಎಂದು ಹೇಳಿದರು.

ಜಾಣಗೆರೆ ವೆಂಕಟರಾಮಯ್ಯ ಮಾತನಾಡಿ ನಗರ ಪ್ರದೇಶದ ಜನರಿಗೆ ಕನ್ನಡ ಭಾಷೆ ಕುರಿತು ಅಭಿಮಾನವಿಲ್ಲ, ಹಳ್ಳಿಗಾಡಿನ ಜನರಿಂದ ಕನ್ನಡ ಭಾಷೆ ಉಳಿದಿದೆ. ಕನ್ನಡ ಭಾಷೆ ಉಳಿಸಲು ತರಾಸು, ಅ.ನ್ರ ಕೃಷ್ಣರಾಯರು, ಅಲೂರು ವೆಂಕಟರಾಯರು, ಮ.ರಾಮಮೂರ್ತಿ, ವಾಟಾಳ್ ನಾಗರಾಜ್ ಅವರಂತ ಧೀಮಂತ ಕನ್ನಡ ಹೋರಾಟಗಾರರಿಂದ ಬೆಂಗಳೂರು ನಗರದಲ್ಲಿ ಕನ್ನಡ ಭಾಷೆ ಉಳಿಯಲು ಸಾಧ್ಯವಾಯಿತೆಂದರು. ಕರ್ನಾಟಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಪ್ರೊ. ಎಲ್.ಎನ್ ಮುಕುಂದರಾಜ್, ನಾಟಕ ಅಕಾಡೆಮಿ ಅಧ್ಯಕ್ಷ ಕೆ ವಿ ನಾಗರಾಜ್ ಮೂರ್ತಿ, ಚಿತ್ರನಟಿ ಅಭಿನಯ, ಕುವೆಂಪು ಕಲಾನಿಕೇತನ ಸಂಸ್ಥೆಯ ಅಧ್ಯಕ್ಷ ಕುವೆಂಪು ಪ್ರಕಾಶ್ ಉಪಸ್ಥಿತರಿದ್ದರು

## ಮನೆಗಳ್ಳನ ಬಂಧನ; 20.40 ಲಕ್ಷ ಮೌಲ್ಯದ 167 ಗ್ರಾಂ ಚಿನ್ನಾಭರಣ ವಶ



**ಕಲಬುರಗಿ,ಡಿ.11–** ಕಲಬುರಗಿ ಈಶ್ವರ ನಗರ ಗಾಬರೆ ಲೇಔಟ್ ನಲ್ಲಿ ಕಳೆದ ನವೆಂಬರ್‌ನಲ್ಲಿ ನಡೆದ ಮನೆಗಳ್ಳತನ ಪ್ರಕರಣ ಬೇಧಿಸಿದ ಸ್ಟೇಷನ್ ಬಜಾರ ಪೊಲೀಸರು ಮನೆಗಳ್ಳನನ್ನು ಬಂಧಿಸಿ ಆತನಿಂದ 20.40 ಲಕ್ಷ ರೂಪಾಯಿ ಮೌಲ್ಯದ 167 ಗ್ರಾಂ ಚಿನ್ನ ಬೆಳ್ಳಿಯ ಆಭರಣ ವಶಪಡಿಸಿಕೊಂಡಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್ ಡಿ ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಧಾರವಾಡ ಮೂಲದ,ಮಹಾರಾಷ್ಟ್ರ ಪುಣೆಯ ಕಲವಾಡ ಬಸ್ತಿ ಲೋಗಂ ನಿವಾಸಿ, ಅಡುಗೆ ಮಾಡುವ ವೃತ್ತಿಯ ನವೀನ ಗುರುಮೂರ್ತಿ ಜೋಶಿ ( 49) ಎಂಬ ಆರೋಪಿಯನ್ನು ಬಂಧಿಸಲಾಗಿದೆ

ನ.23 ರಂದು ಠಾಣೆಗೆ ದೂರು ಸಲ್ಲಿಸಿದ ನಿವೃತ್ತ ಸರಕಾರಿ ನೌಕರ ಈಶ್ವರ ನಗರ ಗಾಬರೆ ಲೇಔಟ್ ನಿವಾಸಿ ಈರಣ್ಣಾ ಯಲ್ಲಪ್ಪ ಪಟ್ಟೇದಾರ ಎಂಬುವವರು ತಾವು ಮನೆಗೆ ಬೀಗ ಹಾಕಿಕೊಂಡು ಊರಿಗೆ ಹೋದಾಗ ಬೀಗ ಮುರಿದು 20.62 ಲಕ್ಷ ರೂ ಬೆಲೆ ಬಾಳುವ ಬಂಗಾರ, ಬೆಳ್ಳಿ ಆಭರಣಗಳು ಮತ್ತು ನಗದು ಹಣ ಕಳ್ಳರು ಕಳ್ಳತನ ಮಾಡಿಕೊಂಡು ಹೋದ ಬಗ್ಗೆ ದೂರು ಸಲ್ಲಿಸಿದ್ದರು.

ಆರೋಪಿತರ ಪತ್ತೆ ಕುರಿತು ಉಪ ಪೊಲೀಸ್ ಆಯುಕ್ತರಾದ ಕನಿಕಾ ಸಿಕ್ರಿವಾಲ್, ಪ್ರವೀಣ ನಾಯಕ, ಸಹಾಯಕ ಪೊಲೀಸ ಆಯುಕ್ತ ಶರಣಬಸಪ್ಪ ಸುಬೇದಾರ ಅವರ ಮಾರ್ಗದರ್ಶನದಲ್ಲಿ, ಸ್ಟೇಷನ್ ಬಜಾರ ಪಿ.ಐ ಗುರುಲಿಂಗಪ್ಪ ಎಂ. ಪಾಟೀಲ್ ಅವರ ನೇತೃತ್ವದಲ್ಲಿ ಸಿಬ್ಬಂದಿಯವರಾದ ಸಿರಾಜ ಪಟೇಲ್, ಪ್ರಭಾಕರ, ಮೋಸಿನ್, ಯಲ್ಲಪ್ಪ, ಶಿವಲಿಂಗ, ಮಲ್ಲಣ್ಣ, ಸಂಗಣ್ಣ, ಸುಮೀತ ಹಾಗೂ ಚನ್ನವಿರೇಶ ಅವರನ್ನೊಳಗೊಂಡ ತಂಡ ರಚಿಸಲಾಗಿತ್ತು. ತಂಡವು ವಿವಿಧ ಆಯಾಮಗಳಲ್ಲಿ ಮಾಹಿತಿ ಕಲೆ ಹಾಕಿ ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ ಅವರು ವಿವರಿಸಿದರು.

## “ಮಕ್ಕಳಿಗೆ ಸಂಸ್ಕಾರ ನೀಡಿರಿ”: ಈಶ್ವರ್ ಸಿಂಗ್ ಠಾಕೂರ್



**ಬೀದರ್, ಡಿ.11–**ಶ್ರೀ ದತ್ತಾಶ್ರಮ ಚಾರಿಟೇಬಲ್ ಟ್ರಸ್ಟ್ ವತಿಯಿಂದ ನಗರದ ರಾಂಪುರೇ ಕಾಲೋನಿಯ ದತ್ತಾಶ್ರಮದಲ್ಲಿ ದತ್ತ ಜಯಂತಿ ಕಾರ್ಯಕ್ರಮ ಭಾನುವಾರ ವಿಜೃಂಭಣೆಯಿಂದ ನೆರವೇರಿತು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಬಿಜೆಪಿ ಮುಖಂಡ ಈಶ್ವರ್ ಸಿಂಗ್ ಠಾಕೂರ್, “ಮಕ್ಕಳಿಗೆ ಬಾಲ್ಯದಿಂದಲೇ ಉತ್ತಮ ಸಂಸ್ಕಾರ ನೀಡುವುದು ಇಂದು ಅತ್ಯಂತ ಅಗತ್ಯ. ಸಂಸ್ಕಾರ ನೀಡುವಲ್ಲಿ ತಾಯಿಯ ಪಾತ್ರ ಶ್ರೇಷ್ಠ. ಮಕ್ಕಳಲ್ಲಿ ಶ್ರದ್ಧೆ, ಗೌರವ ಬೆಳೆಸುವುದು ಸಮಾಜದ ಬದ್ದತೆ,” ಎಂದು ಹೇಳಿದರು.

ಅವರು ಮುಂದುವರಿಸಿ, “ದತ್ತನ ಸೇವೆ ಮಾಡಿದರೆ ಎಲ್ಲ ದೇವರ ಸೇವೆಯಾದಂತೆ. ನಾಥ ಪರಂಪರೆ ಶ್ರೇಷ್ಠ ಪಂಥ. ಸನಾತನ ಧರ್ಮವನ್ನು ಉಳಿಸಿ ಬೆಳೆಯುವುದು ನಮ್ಮ ಕರ್ತವ್ಯ,” ಎಂದು ಹೇಳಿದರು.

ದೇಶ ಸೇವೆಗೆ ನಾಗರಿಕರು ಸದಾ ಸಿದ್ಧರಾಗಿರಬೇಕು ಎಂದು ಕರೆದಾಡಿದ ಅವರು, “ಭಾರತ ಮಾತೆಯ ಬಗ್ಗೆ ಅಭಿಮಾನ, ಪ್ರೀತಿ, ಶ್ರದ್ಧೆ ಎಲ್ಲರಲ್ಲೂ ಇರಬೇಕು,” ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಸುರೇಶ್ ಚನ್ನಶೆಟ್ಟಿ, ದಿನಕರಾವ್ ಕುಲಕರ್ಣಿ, ದಿಗಂಬರ್ ಮಡಿವಾಳ, ಸಂತೋಷ್ ಪಾಟೀಲ್, ಮನೋಹರ ಮಡಿವಾಳ, ರತಿಕಾಂತ್ ಜೋಜನಾ, ಎಂ.ಜಿ. ದೇಶಪಾಂಡೆ, ಗಂಗಾಧರ್ ಹೊಸಳ್ಳಿ, ಮಹಾದೇವ್ ಚಟ್ನಳ್ಳಿ, ಅರುಣಕುಮಾರ್, ಶಶಿಕಾಂತ ಪಂತ, ಪೂಜ್ಯ ಮಿಲಿಂದಾಚಾರ್ಯರು ಹಾಗೂ ಗುರುನಾಥ್ ಹಾವಶೆಟ್ಟಿ ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಿ ತಮ್ಮ ಅಭಿಪ್ರಾಯ ಹಂಚಿಕೊಂಡರು.ಶ್ರೀ ಜಗನ್ನಾಥ್ ಮಹಾರಾಜರು ಆಶೀರ್ವಚನ ನೀಡಿದರು.

ಕಾರ್ಯಕ್ರಮದ ಆರಂಭದಲ್ಲಿ ಕುಮಾರಿ ಆಸ್ತಾ ನೃತ್ಯ ಪ್ರದರ್ಶಿಸಿದರು. ಮಂಜುಳಾ ಸ್ವಾಗತಗೀತೆ ಹಾಡಿದರು. ಮಹಿಳೆಯರ ವತಿಯಿಂದ ತೊಟ್ಟಿಲು ಕಾರ್ಯಕ್ರಮ ಜರುಗಿತು. ದತ್ತಾಶ್ರಮದಲ್ಲಿ ಪಲ್ಲಕ್ಕಿ ಸೇವೆ ಹಾಗೂ ಇತರ ಧಾರ್ಮಿಕ ವಿಧಿವಿಧಾನಗಳು ನೆರವೇರಿದವು.ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

ಕಿರಣ್ ಮಹಾರಾಜರು ಸ್ವಾಗತ ನುಡಿದರು. ಮಹೇಶ್ ಬಚ್ಚಣ್ಣಾನವರು ಕಾರ್ಯಕ್ರಮ ನಿರೂಪಿಸಿದರು. ನೂರಾರು ಮಹಿಳೆಯರು, ಪುರುಷರು ಮತ್ತು ಭಕ್ತರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಲೊಯೋಲ ಸಮಾಜ ಸೇವಾ ಕೇಂದ್ರದಿಂದ ವಿಶ್ವ ಮಾನವ ಹಕ್ಕುಗಳ ದಿನ ಆಚರಣೆ

ಯುವಮಾರ್ಗ ಸುದ್ದಿ



**ಮಾನ್ವಿ,ಡಿ.11–**ತಾಲೂಕಿನ ಚಿಮ್ಲಾಪುರ ಗ್ರಾಮದಲ್ಲಿ ವಿಶ್ವ ಮಾನವ ಹಕ್ಕುಗಳ ದಿನದ ಅಂಗವಾಗಿ ಹಕ್ಕುಗಳ ಕುರಿತಾದ ಸಾಮಾಜಿಕ ಅರಿವಿನ ನಾಟಕ ಮತ್ತು ನೃತ್ಯಗಳ ಮುಖಾಂತರ ಜಾಗೃತಿ ಕಾರ್ಯಕ್ರಮವನ್ನು ಗ್ರಾಮದ ಮಾರಿಕಾಂಭಾ ದೇವಸ್ಥಾನದ ಆವರಣದಲ್ಲಿ ಏರ್ಪಡಿಸಲಾಗಿತ್ತು.

ಲೊಯೋಲ ಸಮಾಜ ಸೇವಾ ಕೇಂದ್ರ, ಮಾನ್ವಿ ಹಾಗೂ ಸಂತ ಜೋಸೆಫರ ಪದವಿ ಪೂರ್ವ ಕಾಲೇಜ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಹಳ್ಳಿಯ ಅನುಭವಕ್ಕಾಗಿ ಬೆಂಗಳೂರಿನಿಂದ ಆಗಮಿಸಿದ್ದ 60 ವಿದ್ಯಾರ್ಥಿಗಳ ತಂಡವು ವಿಶ್ವ ಮಾನವ ಹಕ್ಕುಗಳ ದಿನಾಚರಣೆ ಹಾಗೂ ಹವಾಮಾನ ವೈಪಾರಿತ್ಯ ಕುರಿತು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚಾರಿಸಿ ಜಾಗೃತಿ ಜಾಥ ಮಾಡಲಾಯಿತು ಮತ್ತು ಹಕ್ಕುಗಳ ಕುರಿತು ಕಿರು ಬೀದಿ ನಾಟಕದ ಮೂಲಕ ಅರಿವಿನ ಕಾರ್ಯಕ್ರಮವನ್ನು ನೀಡಲಾಯಿತು. ನಂತರದಲ್ಲಿ ಮಾನವಿಯ ಬುಡಗ ಜಂಗಮ ಕಾಲೋನಿಗೆ ಭೇಟಿ ನೀಡಿ ಅಲ್ಲಿಯ ಅಲೆಮಾರಿ ಜನಾಂಗದವರ ಜೊತೆ ಸಂವಾದ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಅಲ್ಲಿನ ಹಿರಿಯರು ತಮ್ಮ ಜೀವನ ಶೈಲಿ ಹಾಗೂ ತಾವು ಅನುಭವಿಸಿದ ಕಷ್ಟದ ದಿನಗಳ ಕುರಿತು ಮಾಹಿತಿಯನ್ನು ಮಕ್ಕಳೊಡನೆ ಹಂಚಿಕೊಂಡರು. ಅಲ್ಲಿಯೂ ಕೂಡಾ ಮಾನವ ಹಕ್ಕುಗಳ ಕುರಿತು ಅರಿವಿನ ಕಾರ್ಯಕ್ರಮವನ್ನು ನೀಡಿದರು.

ಈ ಕಾರ್ಯಕ್ರಮದಲ್ಲಿ ಸಂತ ಜೋಸೆಫರ ಪದವಿ ಪೂರ್ವ ಕಾಲೇಜು, ಬೆಂಗಳೂರಿನ ನಿರ್ದೇಶಕರಾದ ಫಾ.ಅಶ್ವಿನ್ ಎಸ್.ಜೆ ಅವರು ಹಾಗೂ 5 ಜನ ಸಿಬ್ಬಂಧಿಗಳು ಭಾಗವಹಿಸಿದ್ದರು. ಲೊಯೋಲ ಸಮಾಜ ಸೇವಾ ಕೇಂದ್ರದ ಸಿಬ್ಬಂಧಿಗಳಾದ ರವೀಂದ್ರ ಜಾನೇಕಲ್, ಮರಿಯಪ್ಪ, ಬಸವಲಿಂಗಪ್ಪ, ಬಸವರಾಜ, ವಿಜಯಲಕ್ಷ್ಮೀ ಹಾಗೂ ತಿಮಲಮ್ಮ ಇವರು ಭಾಗವಹಿಸಿದ್ದರು.

# ಶ್ರೀನಿವಾಸ ರಾಮನುಜನ್ ಗಣಿತ ಉದ್ಯಾನ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಲಿ



**ಬೀದರ, ಡಿ.11–**3900 ಕ್ಕೂ ಹೆಚ್ಚು ಗಣಿತ ಸೂತ್ರಗಳು ರಚಿಸುವ ಮೂಲಕ ಶ್ರೀನಿವಾಸ್ ರಾಮಾನುಜನ್ ಅವರು ಜಾಗತಿಕ ಗಣಿತ ಲೋಕಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಸರಳ ಪದ್ಧತಿಯ ಮೂಲಕ ಲೆಕ್ಕ ಮಾಡುವುದನ್ನು ಕಲಿಸಿದ ರಾಮಾನುಜನ್ ಗಣಿತವನ್ನು ಸರಳೀಕರಿಸದರು. ಅವರ ಹೆಸರಿನ ಮೇಲೆ ನಿರ್ಮಿಸಲಾದ ಈ ಗಣಿತ ಉದ್ಯಾನ ವಿದ್ಯಾರ್ಥಿಗಳಿಗೆ ದೊಡ್ಡ ಪ್ರೇರಣೆಯಾಗಲಿ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ನುಡಿದರು.

ಅವರು ಬುಧವಾರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಬಗದರ್‌ನಲ್ಲಿ ಶ್ರೀನಿವಾಸ ರಾಮಾನುಜನ್ ಗಣಿತ ಉದ್ಯಾನ ಉದ್ಘಾಟಿಸಿ ಅವರು ಮಾತನಾಡಿದರು.

ಗಣಿತ ಕ್ಲಿಷ್ಟಕರವಲ್ಲ ಬದಲಾಗಿ ಅತಿ ಸರಳ ಎನ್ನುವುದನ್ನು ವಿನ್ಯಾಸಗಳ ಮೂಲಕ ಈ ಗಣಿತ ಉದ್ಯಾನ ಕಲಿಸಿಕೊಡುತ್ತದೆ. ಇದನ್ನು ಅರ್ಥೈಸಿಕೊಂಡು ಮಕ್ಕಳು ಗಣಿತ ಮತ್ತು ಇತರೆ ವಿಷಯಗಳಲ್ಲಿ ಅತಿ ಹೆಚ್ಚು ಅಂಕ ಪಡೆದು ಕೀರ್ತಿ ತರಬೇಕು. ಬಗದಲ್ ಮೊರಾರ್ಜಿ ದೇಸಾಯಿ ವಸತಿ ಶಾಲೆ ನಿರಂತರ ಶತ ಪ್ರತಿಶತ ಫಲಿತಾಂಶ ನೀಡುತ್ತಿರುವುದು ಶ್ಲಾಘನೀಯ. ಈ ವರ್ಷ 10 ರಲ್ಲಿ 3 ಯಾರ್ಂಕ್ ನೀಡಲು ಪ್ರಯತ್ನಿಸಬೇಕು ಎಂದು ಹೇಳಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ ಪಟವಾಡಿ ಮಾತನಾಡಿ, ಗಣಿತ ಅತ್ಯಂತ ಕಠಿಣ ಅನ್ನುವ ತಪ್ಪು ಕಲ್ಪನೆ ಜನಜನಿತವಾಗಿದೆ. ಗಣಿತವನ್ನು ಪ್ರೀತಿಸದರೆ ಅದರಷ್ಟು ಸರಳ ವಿಷಯ ಮತ್ತೊಂದಿಲ್ಲ. ಜೀವನದ ಸಂಕೀರ್ಣ ಸಮಸ್ಯೆ ಬಿಡಿಸುವ ಮನೋಬಲ ತುಂಬುವ ಗಣಿತವನ್ನು ಆಸಕ್ತಿಯಿಂದ ಕಲಿಯಬೇಕೆನ್ನುವ ಕಿವಿಮಾತು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರಾಚಾರ್ಯ ಚೆನ್ನಬಸವ ಹೇಡೆ ಗಣಿತ ಉದ್ಯಾನದ ಮೂಲಕ ಕಠಿಣ ಪರಿಕಲ್ಪನೆ ಸರಳೀಕರಣಗೊಳಿಸುವ ಕಾರ್ಯ ಮಾಡಲಾಗಿದೆ. ಅಧ್ಯಯನದಲ್ಲಿ ಆಸಕ್ತಿ ಹೆಚ್ಚಿಸಲು ಇದು ಪೂರಕವಾಗಿದೆ. ಈ ಉದ್ಯಾನದ ಸದುಪಯೋಗ ಮಕ್ಕಳು ಪಡೆದುಕೊಂಡರೆ ಉದ್ಯಾನ ನಿರ್ಮಿಸಿದಕ್ಕೂ ಸಾರ್ಥಕವಾಗುತ್ತದೆಯೆಂದು ಹೇಳಿದರು.

ಕಾರ್ಯಕ್ರಮದಲ್ಲಿ ವಸತಿ ಶಾಲೆಯಿಂದ ವರ್ಗವಣೆ ಹೊಂದಿದ ಗಣಿತ ಶಿಕ್ಷಕಿ ನಜಿಮಾ ಪರವಿನ್ ಹಾಗೂ ಉಪ ಪ್ರಾಂಶುಪಾಲರಾಗಿ ನಿಯುಕ್ತರಾದ ಗೌತಮ ಕುದರೆ ಅವರನ್ನು ಸನ್ಮಾನಿಸಲಾಯಿತು. ಹಾಗೂ ಉದ್ಯಾನ ಲೋಕಾರ್ಪಣೆ ಪ್ರಯುಕ್ತ ವಿದ್ಯಾರ್ಥಿಗಳು ತಯ್ಯಾರಿಸಿದ 25 ಗಣಿತ ಮಾದರಿಗಳ ಪ್ರದರ್ಶನ ಮತ್ತು ವಿವರಣೆ ನಡೆಸಿಕೊಡಲಾಯಿತು.

ಈ ಸಂದರ್ಭದಲ್ಲಿ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಸಂಗೀತಾ ಬಿರಾದಾರ, ಕ್ರೈಸ್ ಜಿಲ್ಲಾ ಸಮನ್ವಯ ಅಧಿಕಾರಿ ಶರಣಪ್ಪ ಬಿರಾದಾರ ಪ್ರಾಂಶುಪಾಲ ಗೋವಿಂದ ತಾಮಗೋಳೆ, ವೀರಭದ್ರಪ್ಪ ಮಾಶೆಟ್ಟಿ, ವಿಜಯಕುಮಾರ ಅಕ್ಕಣ್ಣ, ಹಾವಪ್ಪ ಅಬ್ಬೆಂದೆ, ಪ್ರದೀಪ ನಿಡೋದೆ, ಸಿದ್ಧಲಿಂಗಯ್ಯ ಮಠಪತಿ, ಅಶೋಕ ರಾಠೋಡ, ಮಾಣೀಕ ಸಾಗರ, ಮುದಾಸ್ಸಿರ ಅಲಿ, ಶ್ರೀದೇವಿ ಸಾಲಿಮಠ, ಸವಿತಾ ಮಾಶೆಟ್ಟಿ, ವೈಭವಿ ಮಾಣೀಕ, ಶ್ರಾವಂತಿ ಅಂಬೆಸಂಗೆ, ಶಿವರಾಜ ನಳಗೀರೆ ವಸಂತ ರಾಠೋಡ ಉಪಸ್ಥಿತರಿದ್ದರು.

# "ಕರ ವಸೂಲಿ ವಿಶೇಷ ಅಭಿಯಾನ"

ಯುವಮಾರ್ಗ ಸುದ್ದಿ

**ಪೋತ್ನಾಳ,ಡಿ.11–** ಸ್ಥಳೀಯ ಗ್ರಾಮ ಪಂಚಾಯಿತಿ ವತಿಯಿಂದ ಆಸ್ತಿ ತೆರಿಗೆ, ನೀರಿನ ಶುಲ್ಕ, ವ್ಯಾಪಾರ ಪರವಾನಿಗಿ ಶುಲ್ಕ ಮತ್ತು ಇತರ ಸ್ಥಳೀಯ ಕರಗಳನ್ನು ಸಂಗ್ರಹಿಸಲು ಇಂದು ಮನೆ ಮನೆಗೆ ತೆರಳಿ ಕರ ಕಾರ್ಯಕ್ರಮ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಪಿಡಿಒ ಅವರು ಪ್ರತಿ ತಿಂಗಳು ಕರ ನೀಡುವ ಮೂಲಕ ಗ್ರಾಮ ಪಂಚಾಯತಿ ಸದೃಢಗೊಳಿಸಿ ಗ್ರಾಮದ ಅಭಿರುದ್ಧಿಗೆ ಸಹಕರಿಸಬೇಕು ಎಂದರು. ಇದರಿಂದ ಸಂಗ್ರಹವಾದ ಹಣವು ಅಭಿವೃದ್ಧಿ ಕಾರ್ಯಗಳಿಗೆ ಬಳಕೆಯಾಗುತ್ತದೆ. ಈ ಅಭಿಯಾನಗಳು ಕರ ವಸೂಲಾತಿ ಪ್ರಕ್ರಿಯೆಯನ್ನು ಚುರುಕುಗೊಳಿಸಲು ಮತ್ತು ಗರಿಷ್ಠ ತೆರಿಗೆ ಸಂಗ್ರಹಿಸಲು ಆಯೋಜಿಸಲಾಗುತ್ತವೆ. ಕೆಲವು ಬಾರಿ ವಿಶೇಷ ರಿಯಾಯಿತಿಗಳು ಮತ್ತು ಪಾಯಿಂಟ್ ಆಫ್ ಕೇರ್ (ಪಿಒಸಿ) ಯಂತ್ರಗಳನ್ನು ಬಳಸಿ ಮನೆ ಮನೆಗೆ ತೆರಳಿ ವಸೂಲಿ ಮಾಡಲಾಗುತ್ತದೆ.



ಕರ ವಸೂಲಿ ವಿಶೇಷ ಅಭಿಯಾನದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಬಸವರಾಜ್ ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರಾದ ಎ.ಟಿ. ರಮೇಶ್ ಕರ ವಸೂಲಿಗಾರ ಶಿವರಾಜ್ ನಾಯಕ್ ಮತ್ತು ಡಾಟಾ ಎಂಟ್ರಿ ಆಪರೇಟರ್ ನಾಗರಾಜ್ ಮತ್ತು ಸಿಬ್ಬಂದಿಗಳು ಭಾಗವಹಿಸಿದ್ದರು.

## ಡಿ.14 ರಂದು ಕಾರ್ಯನಿರತ ಪತ್ರಕರ್ತರ ಸಂಘದ ನೂತನ ಪದಾಧಿಕಾರಿಗಳ ಚುನಾವಣೆ

ಯುವಮಾರ್ಗ ಸುದ್ದಿ



**ಸಿರವಾರ, ಡಿ.11–** ಕಾರ್ಯನಿರತ ಪತ್ರಕರ್ತರ ಸಂಘದ ಸಿರವಾರ ತಾಲ್ಲೂಕ ಘಟಕದ 2025–2028ನೇ ಸಾಲಿನ ಅವಧಿಗೆ ನೂತನ ಪದಾಧಿಕಾರಿಗಳ ಆಯ್ಕೆಯ ಚುನಾವಣೆಯನ್ನು ಇದೇ ಡಿ.14 ಭಾನುವಾರದಂದು ಮದ್ಯಾಹ್ನ 03 ಗಂಟೆಗೆ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಏರ್ಪಡಿಸಲಾಗಿದೆ ಎಂದು ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರಾದ ಗುರುನಾಥ ಅವರು ತಿಳಿಸಿದ್ದಾರೆ.

ಕಾರ್ಯನಿರತ ಪತ್ರಕರ್ತರ ರಾಜ್ಯ ಸಂಘದ ಸೂಚನೆ ಮೇರೆಗೆ ಜಿಲ್ಲೆಯ ಎಲ್ಲಾ ತಾಲ್ಲೂಕ ಘಟಕಗಳಿಗೆ ನೂತನ ಪದಾಧಿಕಾರಿಗಳ ಆಯ್ಕೆಗಾಗಿ ಚುನಾವಣೆ ಪ್ರಕ್ರಿಯೆಯನ್ನು ನಡೆಸಲಾಗುತ್ತಿದ್ದು, ಅದರಂತೆ ಸಿರವಾರ ತಾಲ್ಲೂಕು ಘಟಕಕ್ಕೆ ನೂತನ ಪದಾಧಿಕಾರಿಗಳ ಆಯ್ಕೆಗಾಗಿ ಇದೇ ಭಾನುವಾರ ಚುನಾವಣೆ ನಡೆಸಲಾಗುವುದು. ಹಾಗಾಗಿ ಅಂದು ಎಲ್ಲಾ ಪತ್ರಕರ್ತರು ಹಾಜರಿದ್ದು ಚುನಾವಣೆ ಪ್ರಕ್ರಿಯೆಯನ್ನು ಸುಸೂತ್ರವಾಗಿ ನಡೆಸಲು ಸಹಕರಿಸಬೇಕು ಎಂದು ಕೋರಿದ್ದಾರೆ.

## ಕುಶಲಕರ್ಮಿಗಳಿಗೆ ಕಿಟ್‌ಗಳ ವಿತರಣೆ; ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

**ರಾಯಚೂರು,ಡಿ.11–** ಇಲ್ಲಿನ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ 2025–26ನೇ ಸಾಲಿನಲ್ಲಿ ಜಿಲ್ಲಾ ಉದ್ಯಮ ಕೇಂದ್ರ ಯೋಜನೆಯಡಿ ಜಿಲ್ಲೆಯ ಗ್ರಾಮೀಣ ಪ್ರದೇಶದ ವಿವಿಧ ವೃತ್ತಿಯಲ್ಲಿ ತೊಡಗಿರುವ ಕುಶಲಕರ್ಮಿಗಳಿಗೆ ಕಿಟ್ಸ್ ವಿತರಣೆಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಮಹಿಳೆಯರಿಗಾಗಿ ಬ್ಯೂಟಿಪಾರ್ಲರ್ ಕಿಟ್ಸ್–150, ಪುರುಷ/ ಮಹಿಳೆಯರಿಗಾಗಿ ಮೊಬೈಲ್ ರಿಪೇರಿ ಕಿಟ್ಸ್–200, ಬಿದಿರು ಬೆತ್ತದ ಉತ್ಪನ್ನಗಳ ತಯಾರಿಕೆ (ಹ್ಯಾಂಡಿ ಕ್ರಾಫ್ಟ್), ಪುರುಷ/ ಮಹಿಳೆಯರಿಗಾಗಿ ದೋಭಿ ಕಿಟ್ಸ್ –150 ಸೇರಿದಂತೆ ಒಟ್ಟು 500 ಕಿಟ್ಗಳನ್ನು ವಿತರಿಸಲಾಗುವುದು.

ದಾಖಲಾತಿಗಳು: ಜನ್ಮ ದಿನಾಂಕ ನಮೂದಿಸಿರುವ ದಾಖಲೆ (ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣ ಪತ್ರ) ಕನಿಷ್ಠ 07ನೇ ತರಗತಿ ತೇರ್ಗಡೆಯಾಗಿರಬೇಕು. (ಬಿದಿರುಬೆತ್ತದ ಉತ್ಪನ್ನಗಳ ತಯಾರಿಕೆ (ಹ್ಯಾಂಡಿ ಕ್ರಾಫ್ಟ್) /ದೋಭಿ ಕಿಟ್ಗೆ ಯಾವುದೇ ಶೈಕ್ಷಣಿಕ ಅರ್ಹತೆಯ ಅವಶ್ಯಕತೆ ಇರುವುದಿಲ್ಲ.) ಜಾತಿ ಪ್ರಮಾಣ ಪತ್ರ (ಪ.ಜಾತಿ, ಪಂ.ಪಂಗಡ & ಅಲ್ಪಸಂಖ್ಯಾತರಿಗೆ ಮಾತ್ರ). ವಿಕಲಚೇತನ/ ವಿಧವೆ ಪ್ರಮಾಣ ಪತ್ರ (ವಿಕಲಚೇತನ/ ವಿಧವೆಯರಾಗಿದ್ದಲ್ಲಿ). ಚಾಲ್ತಿಯಲ್ಲಿರುವ ಪಡಿತರ ಚೀಟಿ (ಬಿ.ಪಿ.ಎಲ್./ ಅಂತ್ಯೋದಯ) ಮತ್ತು ಆಧಾರ್ ಕಾರ್ಡ್. ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರ. ವೃತ್ತಿ ದೃಢೀಕರಣ ಪತ್ರ (ಲೇಬರ್ ಕಾರ್ಡ್)/ಪಿಡಿಓ ಇವರಿಂದ ಪಡೆದ ವೃತ್ತಿ ದೃಢೀಕರಣ ಪತ್ರದೊಂದಿಗೆ ವೆಬ್‌ಸೈಟ್ ವಿಳಾಸ: https://raichur.nic.in ನಲ್ಲಿ ಡಿಸೆಂಬರ್ 31 ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು (ಗ್ರಾಮೀಣ ಕೈಗಾರಿಕೆ) ಅವರ ಕಚೇರಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಪಂಚಾಯತ್ ಹೈದಾರಬಾದ ರಸ್ತೆ ರಾಯಚೂರು ಇವರಿಗೆ ಕಚೇರಿಯ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಉಪ ನಿರ್ದೇಶಕರು ಪ್ರಟಕಣೆಯಲ್ಲಿ ತಿಳಿಸಿದ್ದಾರೆ.

## ಪ್ರತಿಭಾ ಕಾರಂಜಿ ಕಲಿಕೆಗೆ ಪ್ರೇರಕ ಶಕ್ತಿ



**ಜೇವರ್ಗಿ,ಡಿ.11–** ‘ಪ್ರತಿಭಾ ಕಾರಂಜಿ ಕಾರ್ಯಕ್ರಮ ವಿದ್ಯಾರ್ಥಿಗಳಲ್ಲಿ ವ್ಯಕ್ತಿತ್ವ ಹಾಗೂ ಸ್ಪರ್ಧಾತ್ಮಕ ಮನೋಭಾವ ರೂಪಿಸಲು ಪೋಷಕರು ಹಾಗೂ ಶಿಕ್ಷಕರನ್ನು ಪ್ರೋತ್ಸಾಹಿಸುತ್ತದೆ. ಜತೆಗೆ ಮಕ್ಕಳ ಕಲಿಕೆಗೆ ಪ್ರೇರಕ ಶಕ್ತಿಯಾಗಿದೆ’ ಎಂದು ತಹಶೀಲ್ದಾರ್ ಮಲ್ಲಣ್ಣ ಯಲಗೋಡ ತಿಳಿಸಿದರು.

ತಾಲ್ಲೂಕಿನ ಶಖಾಪೂರ ಎಸ್.ಎ ಗ್ರಾಮದ ಸದ್ಗುರು ವಿಶ್ವರಾಧ್ಯರ ಸಿದ್ದ ಸಂಸ್ಥಾನ ತಪೋವನ ಮಠದ ಆವರಣದಲ್ಲಿ ಬುಧವಾರ ಜಿ.ಪಂ ಕಲಬುರಗಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿ–ಗಳ ಕಾರ್ಯಾಲಯದ ವತಿಯಿಂದ 2025–26ನೇ ಸಾಲಿನ ಜೇವರ್ಗಿ ಮತ್ತು ಯಡ್ರಾಮಿ ತಾಲೂಕು ಮಟ್ಟದ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

‘ಕಲಿಕೆ ಎಂದರೆ ಕೇವಲ ಅಂಕ ಗಳಿಕೆ ಅಲ್ಲ. ಕಲಿಕೆ ಜೊತೆ ವಿವಿಧ ಚಟುವಟಿಕೆ ಮೂಲಕ ಮಕ್ಕಳ ಪ್ರತಿಭೆ ಹೊರಹಾಕಲು ಪ್ರತಿಭಾ ಕಾರಂಜಿ ಅನುಕೂಲವಾಗುತ್ತ–

**ಜೇವರ್ಗಿ :** ತಾಲ್ಲೂಕಿನ ಶಖಾಪೂರ ಗ್ರಾಮದಲ್ಲಿ ಆಯೋಜಿಸಲಾಗಿದ್ದ ತಾಲ್ಲೂಕು ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ತಹಶೀಲ್ದಾರ್ ಮಲ್ಲಣ್ಣ ಯಲಗೋಡ ಉದ್ಘಾಟಿಸಿದರು

ಅಲ್ಲದೇ ಹೊಸ ಹೊಸ ಕೌಶಲಗಳು ಕಲಿಯಲು ಪ್ರತಿಭಾ ಕಾರಂಜಿ ಸಹಕಾರಿಯಾಗಲಿದೆ’ ಎಂದು ಹೇಳಿದರು.ವಿಶ್ವರಾಧ್ಯರ ತಪೊವನ ಮಠದ ಸಿದ್ದರಾಮ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಕೆಲ್ಲೂರ ಗ್ರಾ.ಪಂ ಅಧ್ಯಕ್ಷೆ ಸಿದ್ದಮ್ಮ ಮಾವನೂರ ಅಧ್ಯಕ್ಷತೆ ವಹಿಸಿದ್ದರು.ಮುಖ್ಯ ಅತಿಥಿಗಳಾಗಿ ಬಿಇಒ ವೀರಣ್ಣ ಬೊಮ್ಮನಹಳ್ಳಿ, ಬಿಆರ್‌ಸಿ ಎಸ್.ಟಿ.ಬಿರಾದಾರ, ನೌಕರರ ಸಂಘದ

ಅಧ್ಯಕ್ಷ ದಾನಪ್ಪಗೌಡ ಹಳಿಮನಿ, ಅಕ್ಷರ ದಾಸೋಹ ಅಧಿಕಾರಿ ಶಿವಲಿಂಗಪ್ಪ, ಶಿವಪುತ್ರ ಬೀರಗೊಂಡ, ರಮೇಶ ವಿಶ್ವಕರ್ಮ, ದತ್ತು ಪೂಜಾರಿ, ಶಿವಕುಮಾರ ಡಂಬಳ ಸೇರಿದಂತೆ ಎರಡೂ ತಾಲ್ಲೂಕಿನ ವಿವಿಧ ಶಾಲೆಯ ವಿದ್ಯಾರ್ಥಿಗಳು, ಪಾಲಕರು ಹಾಜರಿದ್ದರು. ಬಿಇಒ ವೀರಣ್ಣ ಬೊಮ್ಮನಹಳ್ಳಿ ಸ್ವಾಗತಿಸಿದರು. ಶಿಕ್ಷಕ ಗುರುಶಾಂತಪ್ಪ ಚಿಂಚೋಳಿ ಅವರು ನಿರೂಪಿಸಿ, ವಂದಿಸಿದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111,9743496111

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H